ಸಂಪುಟ : 9 ಸಂಚಿಕೆ 26 ಪುಟ : 4 ಬೆಲೆ : 3.00 ಶನಿವಾರ ಫೆಬ್ರವರಿ 24, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 26 Pages : 4 Price : 3.00 Saturday February 24, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




### ಮಾಧ್ಯಮ ಪ್ರಮಾಣೀಕರಣ, ಮೇಲ್ವಿಚಾರಣಾ ಸಮಿತಿಯ ಕರ್ತವ್ಯಗಳ ಕುರಿತು ವಿಡಿಯೋ ಸಂವಾದ

# ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಮುಂಬರುವ ಲೋಕಸಭಾ ಚುನಾವಣೆ–2024ರ ಅಂಗವಾಗಿ ಕರ್ನಾಟಕ ಚುನಾವಣಾ ಆಯೋಗದಿಂದ ಫೆ.23ರಂದು ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲ್ವಿಚಾರಣಾ ಸಮಿತಿಯ ಜವಾಬ್ದಾರಿ, ಕರ್ತವ್ಯಗಳ ಬಗ್ಗೆ ಜಿಲ್ಲಾ ಚುನಾವಣಾ ವಿಭಾಗದಲ್ಲಿ ವಿಡಿಯೋ ಸಂವಾದ ಜರುಗಿತು.

ವಿಡಿಯೋ ಸಂವಾದದಲ್ಲಿ ಮಾತನಾಡಿದ ಕರ್ನಾಟಕ ಚುನಾವಣಾ ಆಯೋಗದ ಹೆಚ್ಚುವರಿ ಮುಖ್ಯ ಚುನಾವಣಾಧಿಕಾರಿ ವೆಂಕಟೇಶ್‌ಕುಮಾರ್ ಆರ್., ಚುನಾವಣೆಗಳಲ್ಲಿ ನೀತಿ ಸಂಹಿತೆ ಜಾರಿ ದಿನಾಂಕದಿಂದ ಮುಕ್ತಾಯದ ದಿನಾಂಕದವರೆಗೆ ಚುನಾವಣಾ ನಿಯೋಜಿತ ಸಮಿತಿ, ಅಧಿಕಾರಿಗಳು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ, ಅದರನ್ವಯ ಕಾರ್ಯನಿರ್ವಹಿಸಬೇಕು. ಅಭ್ಯರ್ಥಿಗಳು, ರಾಜಕೀಯ ಪಕ್ಷಗಳು ತಮ್ಮ ಪ್ರಚಾರದ ಮಾರ್ಗವಾಗಿ ದಿನಪತ್ರಿಕೆಗಳು, ಸುದ್ದಿವಾಹಿನಿಗಳು, ರೇಡಿಯೋ, ಎಫ್.ಎಂಗಳು, ಸಾಮಾಜಿಕ ಜಾಲತಾಣಗಳನ್ನು ಅವಲಂಬಿಸಿರುತ್ತವೆ. ಆದ್ದರಿಂದ ಇವುಗಳ ಮೇಲೆ ನಿಗಾ ಇಡಲು ಚುನಾವಣಾ ಆಯೋಗದಿಂದ ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲ್ವಿಚಾರಣಾ ಸಮಿತಿಯನ್ನು ರಚಿಸಲಾಗಿದೆ. ಇದರಲ್ಲಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿ ವಾರ್ತಾಧಿಕಾರಿಗಳನ್ನು ಒಳಗೊಂಡು ಜಿಲ್ಲಾ ಚುನಾವಣಾಧಿಕಾರಿಗಳು ಸಮಿತಿಯನ್ನು ರಚಿಸಬೇಕು ಎಂದು ಅವರು ತಿಳಿಸಿದರು.

ಚುನಾವಣೆಗಾಗಿ ಅಭ್ಯರ್ಥಿಗಳು, ರಾಜಕೀಯ ಪಕ್ಷಗಳು ಪತ್ರಿಕೆಗಳು, ಸುದ್ದಿವಾಹಿನಿಗಳು ಮುಂತಾದ ಮಾಧ್ಯಮಗಳ ಮೂಲಕ ನೀಡುವ ಜಾಹೀರಾತುಗಳ ಮೇಲೆ, ಮಾಧ್ಯಮಗಳಲ್ಲಿ ಬರುವ ಸುದ್ದಿಗಳ ಮೇಲೆ ಸಮಿತಿಯು ನಿಗಾ ವಹಿಸಬೇಕು. ಪತ್ರಿಕೆಗಳಲ್ಲಿ ಪ್ರಕಟವಾಗುವ, ಸುದ್ದಿ ವಾಹಿನಿಗಳಲ್ಲಿ ಪ್ರಸಾರವಾಗುವ ಸಂದರ್ಶನ, ಏಕ ವ್ಯಕ್ತಿ ಕೇಂದ್ರಿತ ಸುದ್ದಿಗಳ ಮೇಲೆ ನಿಗಾ ವಹಿಸಿ, ಪೇಯ್ಡ್ ಸುದ್ದಿಯ ಕುರಿತು ಎಚ್ಚರಿಕೆ ವಹಿಸಬೇಕು. ಪೇಯ್ಡ್ ಸುದ್ದಿ ಎಂದು ಸಮಿತಿಯು ನಿರ್ಧರಿಸಿದ ಮೇಲೆ ಆಯೋಗದ ಮಾರ್ಗಸೂಚಿಯನ್ವಯ ಮುಂದಿನ ಕ್ರಮ ಕೈಗೊಳ್ಳಬೇಕು. ಜಾಹೀರಾತು ವೆಚ್ಚದ ಮಾಹಿತಿಯನ್ನು ಆರ್‌ಓ, ಎಕ್ಸ್‌ಪೆಂಡಿಚರ್ ಅಧಿಕಾರಿಗೆ ಪ್ರತಿ ದಿನ ನೀಡಬೇಕು. ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಸಾರವಾಗುವ ಜಾಹೀರಾತು, ಸುದ್ದಿಗಳನ್ನು ಗುರುತಿಸಿ ವರದಿ ಮಾಡಬೇಕು ಎಂದು ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲ್ವಿಚಾರಣಾ ಸಮಿತಿಯ ಕಾರ್ಯಗಳು, ಜವಾಬ್ದಾರಿಗಳ ಕುರಿತು ವಿವರವಾಗಿ ಮಾಹಿತಿ ನೀಡಿದರು.





ಸಾಮಾಜಿಕ ಜಾಲತಾಣಗಳಾದ ಇನ್‌ಸ್ಟಾಗ್ರಾಂ, ಫೇಸ್‌ಬುಕ್, ಟ್ವಿಟ್ಟರ್, ಯೂಟ್ಯೂಬ್, ವಾಟ್ಸಪ್ ಚಾನೆಲ್ ಸೇರಿದಂತೆ ಇತರೆ ವೇದಿಕೆಗಳನ್ನು ಪ್ರಚಾರಕ್ಕಾಗಿ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಹೆಚ್ಚಾಗಿ ಬಳಕೆ ಮಾಡುತ್ತಾರೆ. ಇವುಗಳ ಮೇಲೆ ನಿಗಾವಹಿಸಲು ನುರಿತ ಅಧಿಕಾರಿಗಳನ್ನು ನಿಯೋಜಿಸಲಾಗುವದು. ಈ ಸಾಮಾಜಿಕ ಜಾಲತಾಣಗಲಳ ನಿಗಾ ಸಮಿತಿ ಅಚ್ಚುಕಟ್ಟಾಗಿ ಕರ್ತವ್ಯ ನಿರ್ವಹಿಸಬೇಕು. ಉಲ್ಲಂಘನೆ ಪ್ರಕರಣ ಕಂಡುಬಂದಲ್ಲಿ ಕೂಡಲೇ ಸಮಿತಿಯ ಮುಖ್ಯಸ್ಥರಿಗೆ ವರದಿ ಮಾಡುವ ಮೂಲಕ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ವಿಡಿಯೋ ಸಂವಾದದ ಬಳಿಕ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ವೈಶಾಲಿ ಎಂ.ಎಲ್. ಅವರು ಮಾತನಾಡಿ, ಚುನಾವಣಾ ಅಕ್ರಮಗಳ ಬಗ್ಗೆ, ನೀತಿ ಸಂಹಿತೆಯ ಉಲ್ಲಂಘನೆ ಪ್ರಕರಣಗಳ ಬಗ್ಗೆ ದಿನಪತ್ರಿಕೆ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಪ್ರಸಾರವಾಗುವ ವರದಿಗಳನ್ನು ಕ್ಷಣ ಕ್ಷಣಕ್ಕೆ ಎಂಸಿಎಂಸಿ ಸಮಿತಿಯು ವರದಿ ಮಾಡಬೇಕು. ಉಲ್ಲಂಘನೆ ಪ್ರಕರಣಗಳು ಹಾಗೂ ಚುನಾವಣಾ ಅಕ್ರಮಗಳ ವರದಿಗಳ ಮೇಲೆ ನಿರಂತರ ನಿಗಾವಹಿಸಬೇಕು. ಜಾಹೀರಾತುಗಳಿಗೆ ಅನುಮತಿಯನ್ನು ನೀಡುವಲ್ಲಿ ಹೆಚ್ಚಿನ ನಿಗಾವಹಿಸಿ ಕರ್ತವ್ಯ ನಿರ್ವಹಿಸಬೇಕು ಎಂದರು.

ಸಂವಾದದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ., ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ, ಅಧಿಕಾರಿಗಳಾದ ಮಾರುತಿ ಬ್ಯಾಕೋಡ, ಅಮಿತ ಬಿದರಿ, ರಾಜು ಹೆಬ್ಬಳ್ಳಿ ಉಪಸ್ಥಿತರಿದ್ದರು.

## ಕಾನೂನು, ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**



ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರ ಫೆ.24ರ ಪ್ರವಾಸದ ವಿವರ ಇಂತಿದೆ.

ಸಚಿವರು ಫೆ.24 ರಂದು ಬೆಳಗ್ಗೆ 6.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆಯ ಮೂಲಕ ಬಾದಾಮಿ ತಾಲೂಕು ಹುಯಿಲಗೇರಿಗೆ ಪ್ರಯಾಣ ಬೆಳೆಸುವರು. ಬೆ. 10 ಗಂಟೆಗೆ ಹುಯಿಲಗೇರಿಯಲ್ಲಿ ಶ್ರೀ. ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಹಾಗೂ ತತ್ವಜ್ಞಾನಿ ಶ್ರೀ. ಮಹಾಯೋಗಿ ವೇಮನರ ಮತ್ತು ಬಸವಣ್ಣ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ಹಾಗೂ ದೇವಸ್ಥಾನದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ರಸ್ತೆಯ ಮೂಲಕ ಪ್ರಯಾಣ ಬೆಳೆಸಿ ಮಧ್ಯಾಹ್ನ 3.30ಗಂಟೆಗೆ ಧಾರವಾಡ ಜಿಲ್ಲೆಯ ನವಲಗುಂದಕ್ಕೆ ಆಗಮಿಸುವರು. ಸಂಜೆ 4 ಗಂಟೆಗೆ ನವಲಗುಂದ ಮಾಡೆಲ್ ಹೈಸ್ಕೂಲ್ ಮೈದಾನದಲ್ಲಿ ಮುಖ್ಯಮಂತ್ರಿಗಳ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಾಯಂಕಾಲ 6 ಗಂಟೆಗೆ ಹುಬ್ಬಳ್ಳಿಗೆ ತೆರಳಿ ಅಲ್ಲಿಂದ 6.40 ಗಂಟೆಗೆ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಪ್ರಕಟಣೆ ತಿಳಿಸಿದೆ.

### ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದ ಮಾಜಿ ಸಚಿವ ಅಲ್ಕೋಡ ಹನುಮಂತಪ್ಪ


# ಲೋಕಸಭಾ ಚುನಾವಣೆಯವರೆಗೆ ಮಾತ್ರ ‘ಗ್ಯಾರಂಟಿ’

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಕಡಿಮೆ ಅವಧಿಯಲ್ಲಿ ಇಡೀ ರಾಜ್ಯಾದ್ಯಂತ ಗ್ರಾಮವಾಸ್ತವ್ಯದ ಪರಿಕಲ್ಪನೆಯನ್ನು ಮೂಡಿಸಿದ ಹಾಗೂ ಮಹಿಳೆಯರ ಶ್ರೇಯೋಭಿವೃದ್ಧಿಗಾಗಿ ಭಾಗ್ಯಲಕ್ಷ್ಮೀ ಯೋಜನೆ, ಜಿಲ್ಲಾ/ತಾಲೂಕು ಮಟ್ಟದಲ್ಲಿ ಕ್ರೀಡಾಂಗಣ, ಶಿಕ್ಷಕರ ನೇಮಕಾತಿ, ವಸತಿ ನಿಲಯಗಳ ಸ್ಥಾಪನೆ ಹೀಗೆ ಹಲವು ಜನಪ್ರಿಯ ಯೋಜನೆಗಳನ್ನು ಜಾರಿಗೊಳಿಸಿದ ಕೀರ್ತಿ ಮಾಜಿ ಸಿಎಂ ಕುಮಾರಸ್ವಾಮಿ ಅವರಿಗೆ ಸಲ್ಲುತ್ತದೆ ಎಂದು ಮಾಜಿ ಸಚಿವ ಅಲ್ಕೋಡ ಹನುಮಂತಪ್ಪ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ಪ್ರವಾಸಿಮಂದಿರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಮತ್ತು ಮಾಜಿ ಸಿಎಂ ಕುಮಾರಸ್ವಾಮಿ ಅವರ ನಿರ್ದೇಶನದ ಮೇರೆಗೆ ಪಕ್ಷ ಅಧಿಕಾರದಲ್ಲಿದ್ದ ಸಮಯದಲ್ಲಿ ಜಾರಿಗೊಳಿಸಿದ ಯೋಜನೆಗಳನ್ನು ಜಿಲ್ಲೆ ಹಾಗೂ ತಾಲೂಕು ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಪಕ್ಷವನ್ನು ಸಂಘಟಿಸುವುದರ ಜೊತೆಗೆ ಈ ಎಲ್ಲ ಯೋಜನೆಗಳ ಬಗ್ಗೆ ಜನತೆಗೆ ಮನವರಿಕೆ ಮಾಡುವ ಜವಾಬ್ದಾರಿಯನ್ನು ವಹಿಸಿದ್ದಾರೆ. ಅದರಂತೆ ಸಂಘಟನೆ ಮಾಡಲಾಗುತ್ತಿದೆ ಎಂದರು.



ಪ್ರಸ್ತುತ ರಾಜ್ಯ ಸರಕಾರ ಹಳೆಯ ಬಸ್‌ಗಳನ್ನು ಕೊಟ್ಟಿರುವ ಕಾರಣ, ಊರಿಗೆ ಹೋಗುವುದಕ್ಕೂ ಗ್ಯಾರಂಟಿ ಇಲ್ಲದ ಪರಿಸ್ಥಿತಿಯಲ್ಲಿ ಜನತೆ ಇದ್ದಾರೆ. ಶಾಲಾ–ಕಾಲೇಜುಗಳ ತರಗತಿಗಳಿಗೆ ಸಮಯಕ್ಕೆ ಸರಿಯಾಗಿ ಹಾಜರಾಗದೇ ಅನೇಕ ತೊಂದರೆಗಳನ್ನು ವಿದ್ಯಾರ್ಥಿಗಳು ಅನುಭವಿಸುತ್ತಿದ್ದಾರೆ. ಪುರುಷರು ನಿಮಗೆ ಮತ ಹಾಕಿಲ್ಲವೇ, ಅವರಿಗೂ ಯೋಜನೆಯ ಲಾಭ ಪಡೆದುಕೊಳ್ಳಲು ಆದೇಶ ಮಾಡಿ. ಗೃಹಜ್ಯೋತಿ ಸಮರ್ಪಕವಾಗಿ ಕಾರ್ಯಗತವಾಗಿಲ್ಲ, ನಿರುದ್ಯೋಗಿಗಳಿಗೆ ಮಾಸಾಶನ ನೀಡಿಲ್ಲ, 10ಕೆಜಿ ಅಕ್ಕಿ ನೀಡಿಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಜೆಡಿಎಸ್ ಜಿಲ್ಲಾಧ್ಯಕ್ಷ ಮಕ್ತುಂಸಾಬ ಮುಧೋಳ, ಗುರುರಾಜ ಹುಣಸಿಮರದ, ಮಾಜಿ ಶಾಸಕ ವೀರಭದ್ರಪ್ಪ ಹಾಲರವಿ, ರಾಜ್ಯವಕ್ತಾರ ವೆಂಕನಗೌಡ ಗೋವಿಂದಗೌಡ, ಮಹಿಳಾ ಜಿಲ್ಲಾಧ್ಯಕ್ಷೆ ಮಂಜುಳಾ ಮೇಟಿ, ತಾಲೂಕಾಧ್ಯಕ್ಷ ಶಂಕರಣ್ಣ ಬಾಳಿಕಾಯಿ, ಜಿ.ಎ. ಬುರಡಿ, ಎಂ.ಎಸ್. ಪರ್ವತಗೌಡ್ರ, ಪ್ರಕಾಶ ದೊಡ್ಡಮನಿ, ಲಕ್ಷ್ಮಣ ನಾಯಕ, ದೇವಪ್ಪ ಮಲ್ಲಸಮುದ್ರ, ಪ್ರವೀಣ ಬಾಳಿಕಾಯಿ, ಬಸವರಾಜ ಹರಿಜನ, ಮಂಜುನಾಥ ದೊಡ್ಡಮನಿ, ಜಾಕಿರಹುಸೇನ ಹವಾಲ್ದಾರ, ವಿನಾಯಕ ಪರಬತ, ಫಕ್ಕೀರಪ್ಪ ತುಳಿ, ಬಸವರಾಜ ಅಪ್ಪಣ್ಣವರ, ಹಾಜಿಅಲಿ ಕುಂದ್ರಳ್ಳಿ, ಶರಣಪ್ಪ ಹೂಗಾರ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

> ಸಿಎಂ ಸಿದ್ದರಾಮಯ್ಯ ಅವರು ಆರ್ಥಿಕ ತಜ್ಞರಿದ್ದಾರೆ. ಅವರ ಮೇಲೆ ಸಾಕಷ್ಟು ಭರವಸೆಯನ್ನು ಹೊಂದಿದ್ದೆವು. ಆದರೆ ಈ ಬಾರಿ ಅವರು ಸಮರ್ಪಕವಾಗಿ ಯೋಜನೆಗಳನ್ನು ಜಾರಿಗೊಳಿಸಿಲ್ಲ. ಸುಳ್ಳಿನ ಗ್ಯಾರಂಟಿ ನೀಡಿ ಜನತೆಯ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಾ, ಕೇಂದ್ರ ಸರಕಾರದ ಕಡೆಗೆ ಬೊಟ್ಟು ಮಾಡುತ್ತಿದ್ದಾರೆ. ಈ ಎಲ್ಲ ಗ್ಯಾರಂಟಿಗಳು ಲೋಕಸಭಾ ಚುನಾವಣೆಯವರೆಗೆ ಮಾತ್ರ ಇರಲಿವೆ.
>
> – **ಅಲ್ಕೋಡ ಹನುಮಂತಪ್ಪ.**
> ಮಾಜಿ ಸಚಿವರು.

### ಮೂರು ದಿನಗಳ ನಾಟಕೋತ್ಸವ ಉದ್ಘಾಟಿಸಿದ ತೋಂಟದ ಸಿದ್ಧರಾಮ ಶ್ರೀಗಳು

# ರಂಗಭೂಮಿಗೆ ಜಿಲ್ಲೆಯ ಕೊಡುಗೆ ಅಪಾರ



**■ವಿಜಯಸಾಕ್ಷಿ ಸುದ್ದಿ, ಗದಗ**

ಕಾವ್ಯಗಳಲ್ಲಿಯೇ ನಾಟಕ ರಮ್ಯವಾದುದು. ನವರಸಗಳಿಂದ ಸಂಪದ್ಭರಿತವಾದ ನಾಟಕಗಳು ಜನಮಾನಸವನ್ನು ಬೇಗನೇ ತಲುಪಿ ಮನರಂಜನೆಯೊಂದಿಗೆ ಮೌಲ್ಯಗಳನ್ನು ಬಿತ್ತುವ ಕಾರ್ಯವನ್ನು ಅನೇಕ ವರ್ಷಗಳಿಂದ ಮಾಡುತ್ತಾ ಬಂದಿವೆ. ಕನ್ನಡದ ರಂಗಭೂಮಿಗೆ ಜಿಲ್ಲೆಯ ಕೊಡುಗೆ ಅಪಾರವಾದುದು ಎಂದು ತೋಂಟದ ಸಿದ್ಧರಾಮಸ್ವಾಮಿಗಳು ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ತೋಂಟದಾರ್ಯ ಕಲಾರಂಗ ಹಾಗೂ ರಂಗಾಸಕ್ತರ ಬಳಗದ ಸಹಯೋಗದಲ್ಲಿ ಜರುಗಿದ ಮೂರು ದಿನಗಳ ಸಾಣೇಹಳ್ಳಿ ಶಿವಸಂಚಾರ ನಾಟಕೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ಜನರ ಮನಸ್ಸನ್ನು ಅರಳಿಸುವ, ಸಂತೋಷವನ್ನು ನೀಡುವ, ಸಮಾಜಕ್ಕೆ ಸಂದೇಶ ನೀಡಿ ಲೋಪದೋಷಗಳನ್ನು ತಿದ್ದುವ ಉದ್ದೇಶವನ್ನು ನಾಟಕಗಳು ಹೊಂದಿರುತ್ತವೆ. ಆಧುನಿಕ ತಂತ್ರಜ್ಞಾನಗಳ ಭರಾಟೆಯಲ್ಲಿ ಮುಳುಗಿರುವ ಜನರಿಗೆ ನೇರವಾಗಿ ನಡೆಯುವ ಸನ್ನಿವೇಶಗಳನ್ನು ತೋರಿಸುವ ಕಾರ್ಯ ನಡೆದಿರುವದು ಸಂತೋಷದ ಸಂಗತಿಯಾಗಿದೆ ಎಂದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಸಾಂಸ್ಕೃತಿಕವಾಗಿ ಶ್ರೀಮಂತ ಪ್ರದೇಶವಾಗಿದೆ. ಕರ್ನಾಟಕದ ನಿಜವಾದ ಸಾಂಸ್ಕೃತಿಕ ರಾಜಧಾನಿ ಗದಗ. ಇಲ್ಲಿ ಸಾಹಿತ್ಯ, ಸಂಗೀತ, ರಂಗಭೂಮಿ ಕ್ಷೇತ್ರಗಳು ಪ್ರಾಚೀನ ಕಾಲದಿಂದಲೂ ಮೂಲನೆಲೆಯಾಗಿ ಗುರುತಿಸಿಕೊಂಡಿವೆ. ಈ ಹಿನ್ನೆಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ವಿವಿಧ ಸಂಘಟನೆಗಳ ಜೊತೆಗೂಡಿ ಸಾಂಸ್ಕೃತಿಕ ವೈಭವವನ್ನು ಪಸರಿಸುವ ಕಾರ್ಯ ಮಾಡುತ್ತಿದೆ. ಈ ಕಾರ್ಯಕ್ಕೆ ಸಾಂಸ್ಕೃತಿಕ ಮನಸ್ಸಿನ ಜನ ಕೈಜೋಡಿಸುತ್ತಿರುವದು ಪೂರಕ ಬೆಳವಣಿಗೆಯಾಗಿದೆ ಎಂದರು.

ವೇದಿಕೆ ಮೇಲೆ ನಾಟಕೋತ್ಸವ ಸಂಚಾಲಕರಾದ ಡಾ. ಜಿ.ಬಿ. ಪಾಟೀಲ, ಅಶೋಕ ಬರಗುಂಡಿ, ಡಾ.ಅನಂತ ಶಿವಪೂರ, ಸಾಹಿತಿಗಳಾದ ಪ್ರೊ.ಚಂದ್ರಶೇಖರ ವಸ್ತ್ರದ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪುರಶೆಟ್ರ, ವೈದ್ಯರಾದ ಡಾ. ಶೇಖರ ಸಜ್ಜನರ ಉಪಸ್ಥಿತರಿದ್ದರು.

ಗೌರವ ಕಾರ್ಯದರ್ಶಿ ಶಿವಾನಂದ ಗಿಡ್ನಂದಿ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ವಂದಿಸಿದರು.

> ಮೂರು ದಿನಗಳ ನಾಟಕೋತ್ಸವದಲ್ಲಿ ಡಾ. ನಟರಾಜ ಬೂದಾಳ ಅವರು ರಚಿಸಿದ, ಸಿ. ಬಸವಲಿಂಗಯ್ಯ ನಿರ್ದೇಶಿಸಿದ ‘ಕಲ್ಯಾಣದ ಬಾಗಿಲು’ ನಾಟಕ, ಕೆ.ಎನ್. ಸಾಳುಂಕೆ ರಚಿಸಿದ, ಮಾಲತೇಶ ಬಡಿಗೇರ ನಿರ್ದೇಶಿಸಿದ ‘ತಾಳಿಯ ತಕರಾರು’ ಹಾಗೂ ಜಯಂತ ಕಾಯ್ಕಿಣಿ ರಚಿಸಿದ ಹುಲಗಪ್ಪ ಕಟ್ಟಿಮನಿ ನಿರ್ದೇಶಿಸಿದ ‘ಜತೆಗಿರುವನು ಚಂದಿರ’ ನಾಟಕಗಳು ಪ್ರದರ್ಶನಗೊಂಡು ರಂಗಾಸಕ್ತರ ಮನ ತಣಿಸಿದವು.

# ಜಾತ್ರೆಗಳು ಮನುಜನ ಅಂಧಕಾರ ಕಳೆಯುತ್ತವೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಜಾತ್ರೆಗಳು ಮನುಷ್ಯನ ಬದುಕು ಹಸನಾಗುವಂತೆ ಮಾಡುತ್ತವೆ ಎಂದು ಬೆಂಗಳೂರು ಅಗ್ನಿಶಾಮಕ ಮತ್ತು ತುರ್ತುಸ್ಥಿತಿ ವಿಭಾಗದ ಡಿಐಜಿ ರವಿ ಚನ್ನಣ್ಣವರ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ 165ನೇ ಜಾತ್ರಾ ಮಹೋತ್ಸವದ ರಥೋತ್ಸವ ನಂತರ ಜರುಗಿದ ಅನುಭಾವ ಗೋಷ್ಠಿ–2ರಲ್ಲಿ ಮಾತನಾಡಿದರು.

ಜಾತ್ರೆಗಳು ಮನುಷ್ಯನ ಬದುಕಿನ ಕತ್ತಲೆ ಕಳೆಯುವ ಮೂಲಕ ಶರಣರ ತತ್ವ–ಸಿದ್ಧಾಂತಗಳು, ನಡೆ–ನುಡಿ, ಸಮಾಜದಲ್ಲಿ ಬದುಕುವ ರೀತಿ–ನೀತಿ ಕಲಿಸುತ್ತವೆ. ಪ್ರತಿಯೊಬ್ಬರ ಮನೆಯಲ್ಲಿ ಶರಣ–ಶರಣೆಯರು ಆಗುವಂತೆ ಸಂಸ್ಕಾರ, ಶಿಕ್ಷಣ ನೀಡುವ ಮೂಲಕ ಸ್ವಾವಲಂಬಿ ಬದುಕು ಬದುಕುವಂತೆ ಪ್ರೇರೇಪಿಸಿದಲ್ಲಿ ಸುಂದರ ಸಮಾಜ ನಿರ್ಮಾಣವಾಗುತ್ತದೆ ಎಂದರು.

ರೇವಣಸಿದ್ದಯ್ಯ ಮರಿದೇವರಮಠ ವಚನ ಸಂಗೀತ ನೀಡಿದರು. ಡಾ. ಶಿವಗಂಗಾ ರಂಜನಗಿ ಉಪನ್ಯಾಸ ನೀಡಿದರು. ದೂರದರ್ಶನ ಕಲಾವಿದರಾದ ಶರಣು ಕುರ್ನಾಳ, ಬಸವರಾಜ ಗುಡ್ಡಪ್ಪನವರ, ಮುನೀರ್ ಮುದ್ದೆಬಿಹಾಳ, ಗಂಗಾಧರ ಪೂಜಾರಿ ಇವರಿಂದ ಮನರಂಜನೆ ಜರುಗಿತು. ಗದಗ ನಿಮಿಷಾಂಬಾ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯವರಿಂದ ಭರತನಾಟ್ಯ, ಕುಚುಪುಡಿ ನೃತ್ಯ ಜರುಗಿತು.

ಸಾನ್ನಿಧ್ಯವನ್ನು ಹಾಲಕೇರಿ, ಹೊಸಪೇಟಿ ಅನ್ನದಾನೇಶ್ವರಮಠದ ಜಗದ್ಗುರು ಬಸವಲಿಂಗ ಮಾಹಾಸ್ವಾಮಿಜಿ, ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು, ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿದ್ದರು. ರಂಜನಿ ಉಪನ್ಯಾಸ ನೀಡಿದರು. ಮಾಹಾದೇವಪ್ಪ ಬಟ್ಟೂರ, ಜಾತ್ರಾ ಸಮಿತಿ ಅಧ್ಯಕ್ಷ ಬಸವರಾಜ ಬಾತಾಖಾನಿ, ಕೆ.ಎಂ. ಹೆರಕಲ್ಲ, ಶಿದ್ದು ಕತ್ತಿ, ಈರಣ್ಣ ದೊಟಿಕಲ್ಲ ಇದ್ದರು.

## ಸಾಕ್ಷಿ ಸುಭಾಷಿತ

ಕತ್ತಲೆ ಇಲ್ಲದೇ ಇದ್ದಿದ್ದರೆ ಬೆಳಕಿನ
ಮಹಿಮೆಯನ್ನು ತಿಳಿಯಲಾಗುತ್ತಿರಲಿಲ್ಲ.
-ಶ್ರೀ ರಾಮಕೃಷ್ಣ ಪರಮಹಂಸ

## ಸಂಪಾದಕೀಯ

### ದರಪಟ್ಟಿ ಬಿಡಿ ದರ ಪರಿಷ್ಕರಣೆ ಮಾಡಿ

ರಾಜ್ಯ ಸರಕಾರ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ದರ ಪಟ್ಟಿ ಪ್ರಕಟಿಸುವುದನ್ನು ಕಡ್ಡಾಯಗೊಳಿಸಿ ಆದೇಶ ಹೊರಡಿಸಿದೆ. ಖಾಸಗಿ ಆಸ್ಪತ್ರೆಗಳು ಬೇಕಾಬಿಟ್ಟಿ ದರ ವಿಧಿಸುತ್ತಿವೆ ಎನ್ನುವ ದೂರಿನ ಹಿನ್ನೆಲೆಯಲ್ಲಿ ಸರ್ಕಾರ ಈ ನಿರ್ಧಾರವನ್ನು ಕೈಗೊಂಡಿದೆ.

ಖಾಸಗಿ ಆಸ್ಪತ್ರೆಗಳು ತಮ್ಮ ದರ ಪಟ್ಟಿಯನ್ನು ಪ್ರಕಟಿಸಬೇಕು ಎನ್ನುವ ನಿಯಮ ಅನೇಕ ವರ್ಷಗಳಿಂದ ಇದೆ. ಬಹುತೇಕ ಎಲ್ಲ ಆಸ್ಪತ್ರೆಗಳಲ್ಲಿ ಈ ನಿಯಮ ಪಾಲನೆ ಆಗುತ್ತಿದೆ. ಕೆಲವೇ ಕೆಲವು ಆಸ್ಪತ್ರೆಗಳು ಮಾತ್ರ ದರ ಪ್ರಕಟಿಸಿಯೂ ಹೆಚ್ಚಿನ ಹಣ ವಸೂಲಿ ಮಾಡುತ್ತಿರುವುದು ಸಾಮಾನ್ಯ ವಿಚಾರ.

ಸರಕಾರ ಖಾಸಗಿ ಆಸ್ಪತ್ರೆಗಳಲ್ಲಿನ ದರಪಟ್ಟಿ ಪ್ರಕಟಿಸುವ ಜೊತೆಗೆ ಅವುಗಳ ದರವನ್ನ ಪರಿಷ್ಕರಣೆ ಮಾಡಬೇಕು. ಈಗಾಗಲೇ ಆಸ್ಪತ್ರೆಗಳು ವಿಧಿಸುತ್ತಿರುವ ದರ ಗರಿಷ್ಠ ಮಟ್ಟದ್ದಾಗಿದೆ. ಸರ್ಕಾರ ಅವುಗಳ ಪರಿಷ್ಕರಣೆ ಮಾಡಿ, ಆಸ್ಪತ್ರೆಯಲ್ಲಿರುವ ಸೌಲಭ್ಯಗಳು ಮತ್ತು ಹಾಸಿಗೆ ಸಂಖ್ಯೆ ಆಧರಿಸಿ ಒಂದು ಬೆಲೆಯನ್ನ ನಿಗದಿ ಮಾಡಬೇಕು. ಆ ನಿಯಮ ಪಾಲನೆ ಬಗ್ಗೆ ನಿಯಮಿತವಾಗಿ ನಿಗಾ ವಹಿಸಬೇಕು.

ಜೊತೆಗೆ ಸರ್ಕಾರ ಆಯುಷ್ಮಾನ್ ಭಾರತ ಆರೋಗ್ಯ ಯೋಜನೆಯಡಿ, ಖಾಸಗಿ ಆಸ್ಪತ್ರೆಗಳಿಗೆ ಚಿಕಿತ್ಸಾ ವೆಚ್ಚಗಳಿಗೆ ನೀಡುವ ಹಣ ಮತ್ತು ಅದೇ ಚಿಕಿತ್ಸೆಯನ್ನು ಆಸ್ಪತ್ರೆಗಳಲ್ಲಿ ವಿಧಿಸುವ ದರವನ್ನು ತುಲನೆ ಮಾಡಿ ನೋಡಿದಾಗ ಸರಕಾರ ಎಲ್ಲಿ ತಪ್ಪು ಮಾಡಿದೆ ಎನ್ನುವುದು ಅರ್ಥವಾಗುತ್ತದೆ. ಹೀಗಾಗಿ ಸರಕಾರ ದರಪಟ್ಟಿ ಕಡ್ಡಾಯ ಪ್ರಕಟಣೆ ಜೊತೆಗೆ ದರ ಪರಿಷ್ಕರಣೆಗೂ ಮುಂದಾಗಬೇಕು.

## ಗಡಿ ವಿವಾದದ ಖ್ಯಾತೆ: ಮಹಾರಾಷ್ಟ್ರಕ್ಕೆ ಸಚಿವ ಎಚ್.ಕೆ.ಪಾಟೀಲ ಎಚ್ಚರಿಕೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗಡಿ ವಿಚಾರದಲ್ಲಿ ಪದೇ ಪದೇ ಕ್ಯಾತೆ ತೆಗೆಯುತ್ತಿರುವ ನೆರೆಯ ಮಹಾರಾಷ್ಟ್ರಕ್ಕೆ ಕರ್ನಾಟಕ ಶುಕ್ರವಾರ ಎಚ್ಚರಿಕೆ ನೀಡಿದೆ. ನಾವು ದೇಶದಲ್ಲಿನ ಒಕ್ಕೂಟ ವ್ಯವಸ್ಥೆಯ ಭಾಗವಾಗಿದ್ದೇವೆ. ನಮ್ಮ ಅನುಮತಿ ಇಲ್ಲದೆ ಗಡಿಯೊಳಗೆ ಯಾವುದೇ ಚಟುವಟಿಕೆ ಕೈಗೊಳ್ಳಲು ಮಹಾರಾಷ್ಟ್ರ ಯತ್ನಿಸಿದರೆ, ಕಾನೂನು ಮತ್ತು ಸಂವಿಧಾನಕ್ಕೆ ಅಗೌರವ ತೋರಿಸುವಂತಹದ್ದಾಗಿದ್ದು, ಅಂತಹ ಚಟುವಟಿಕೆಗಳನ್ನು ಕರ್ನಾಟಕ ಸಹಿಸುವುದಿಲ್ಲ ಎಂದು ಕಾನೂನು ಸಚಿವ ಎಚ್. ಕೆ. ಪಾಟೀಲ್ ವಿಧಾನಪರಿಷತ್ತಿನಲ್ಲಿ ಶುಕ್ರವಾರ ಹೇಳಿದರು.



ಗಡಿ ವಿಚಾರದಲ್ಲಿ ಕ್ಷುಲ್ಲಕ ರಾಜಕಾರಣಕ್ಕೆ ಬರುವುದಿಲ್ಲ ಎಂದು ಯಾವಾಗಲೂ ಕರ್ನಾಟಕ ಸ್ಪಷ್ಟಪಡಿಸುತ್ತಿದೆ. ಆದರೆ ಮಹಾರಾಷ್ಟ್ರದಲ್ಲಿ ಅಧಿಕಾರದಲ್ಲಿರುವವರು ಚುನಾವಣೆ ಬಂದಾಗಲೆಲ್ಲಾ ಆ ರೀತಿ ನಡೆದುಕೊಳ್ಳುತ್ತಾರೆ. ನಮ್ಮ ನಿಲುವು ಸ್ಪಷ್ಟವಾಗಿದೆ. ಯಥಾಸ್ಥಿತಿ ಕಾಯ್ದುಕೊಳ್ಳುವಿಕೆ ಅಥವಾ ಮಹಾಜನ್ ವರದಿಯೇ ಅಂತಿಮ. ಅವರು ಸುಪ್ರೀಂ ಕೋರ್ಟ್‌ಗೆ ಹೋದರೆ ನಾವು ಸುಮ್ಮನೆ ಕೂರುವುದಿಲ್ಲ. ಅವರು ಇಂತಹ ಅನಗತ್ಯ ರಾಜಕೀಯವನ್ನು ನಿಲ್ಲಿಸಬೇಕು, ಆದರೆ ಅವರು ಹಾಗೆ ಮುಂದುವರಿಸಿದರೆ ನಾವು ಸೂಕ್ತವಾದ ಉತ್ತರ ನೀಡುತ್ತೇವೆ. ಅವರು ತಡೆದುಕೊಳ್ಳಲು ಆಗುವುದಿಲ್ಲ ಎಂದರು.

ಕರ್ನಾಟಕದಲ್ಲಿ ಮರಾಠಿ ಮಾತನಾಡುವ ಜನರನ್ನು ಹೇಗೆ ನಡೆಸಿಕೊಳ್ಳಲಾಗುತ್ತದೆ ಎಂಬುದನ್ನು ಅವರು ನೋಡಬೇಕು. ಬೆಳಗಾವಿ ಪಾಲಿಕೆಯಲ್ಲಿ ಅಧಿಕಾರ ಪಡೆದಿದ್ದಾರೆ. ಕರ್ನಾಟಕ ನಡೆದುಕೊಳ್ಳುವ ರೀತಿಯಲ್ಲಿ ಮಹಾರಾಷ್ಟ್ರ ನಡೆದುಕೊಂಡು ಗಡಿ ಪ್ರದೇಶದಲ್ಲಿ ಶಾಂತಿಯುತ ವಾತಾವರಣ ನಿರ್ಮಿಸಬೇಕು ಎಂದು ಸಚಿವರು ಹೇಳಿದರು.

ಇದಕ್ಕೂ ಮುನ್ನಾ ಮಾತನಾಡಿದ ವಿಧಾನಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್, ಇತ್ತೀಚೆಗೆ ಮುಂಬೈನಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡಿದ್ದ ಬೆಳಗಾವಿಯ ಎಂಇಎಸ್ ನಿಯೋಗವು ಕರ್ನಾಟಕದ ಗಡಿ ಪ್ರದೇಶಗಳಲ್ಲಿ ವಾಸಿಸುವ ಮರಾಠಿ ಭಾಷಿಕ ಜನರ ಬೇಡಿಕೆಗಳ ಕುರಿತು ಚರ್ಚಿಸಿದ್ದಾರೆ. ಅಲ್ಲದೇ 865 ಗಡಿ ಗ್ರಾಮಗಳ ಜನರಿಗೆ ಎಲ್ಲಾ ಬೆಂಬಲ ನೀಡಲು ನಿರ್ಧರಿಸಿದ್ದಾರೆ. ಮಹಾರಾಷ್ಟ್ರ ಸರ್ಕಾರ ಆರೋಗ್ಯ ಯೋಜನೆಯನ್ನು ಜಾರಿಗೆ ತರಲು ತೀರ್ಮಾನಿಸಿದ್ದು, ಅವರಿಗೆ ಸಹಾಯ ಮಾಡಲು ತಹಶೀಲ್ದಾರ್ ಶ್ರೇಣಿಯ ಅಧಿಕಾರಿಗಳನ್ನು ನೇಮಿಸಿದೆ ಎಂದು ತಿಳಿಸಿದರು.

## ಬೆಂಗಳೂರು: ಫೆ.29 ರಿಂದ ಮಾ.9 ರವರೆಗೆ ಸರಸ್ ಮೇಳ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಹಿಳೆಯರ ಸಬಲೀಕರಣ ಮತ್ತು ಸ್ವಾವಲಂಬನೆಗೊಳಿಸುವ ಏಕೈಕ ಉದ್ದೇಶದಿಂದ ಬೆಂಗಳೂರಿನ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಇದೇ ತಿಂಗಳ 29ರಿಂದ ಮಾ.9ರವರೆಗೆ ರಾಷ್ಟ್ರೀಯ ಸಾರಸ್ ಮೇಳ ಮತ್ತು ಬೃಹತ್ ರಾಷ್ಟ್ರೀಯ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಆಯೋಜನೆ ಮಾಡಲಾಗಿದೆ.

ಈ ಸಂಬಂಧ ಶುಕ್ರವಾರ ವಿಕಾಸಸೌಧದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಶಾಸಕರಾದ ಎಸ್.ಟಿ.ಸೋಮಶೇಖರ್, ಶ್ರೀನಿವಾಸ್ ಸೇರಿದಂತೆ ಮತ್ತಿತರ ಅಧಿಕಾರಿಗಳು,ನಮ್ಮ ಸರಸ್ ಮೇಳ 2024 ಮತ್ತು ಅಕ್ಕ ಕೆಫೆ ಲೋಗೋ ಅನಾವರಣಗೊಳಿಸಿದರು.

ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರು, ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯಿಂದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಬೃಹತ್ ವಸ್ತುಪ್ರದರ್ಶನ ಮತ್ತು ಮಾರಾಟ ಮೇಳ ಇದೇ ತಿಂಗಳ 29ರಿಂದ ಮಾ.9ರವರೆಗೆ ನಡೆಯಲಿದೆ ಎಂದು ಮಾಹಿತಿ ನೀಡಿದರು.




ರಾಷ್ಟ್ರೀಯ ಸರಸ್ ಮೇಳವು ರಾಷ್ಟ್ರೀಯ ಮಟ್ಟದ ಕಾರ್ಯಕ್ರಮವಾಗಿದ್ದು, ಇದರಲ್ಲಿ ದೇಶಾದ್ಯಂತದ 250 ಸ್ವ-ಸಹಾಯ ಗುಂಪುಗಳು ಭಾಗವಹಿಸಲಿವೆ. ಗುಂಪುಗಳು ಉತ್ಪಾದಿಸಿದ ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸುತ್ತವೆ.

ಈ ಕಾರ್ಯಕ್ರಮವು ಕರ್ನಾಟಕದಾದ್ಯಂತ ವಿವಿಧ ರೀತಿಯ ಕರಕುಶಲ ವಸ್ತುಗಳನ್ನು ಮತ್ತು ವಿವಿಧ ರೀತಿಯ ಆಹಾರ ಉತ್ಪನ್ನಗಳನ್ನು ಪ್ರದರ್ಶಿಸುತ್ತದೆ. ಕಾರ್ಯಕ್ರಮವು ವಿವಿಧ ಗಣ್ಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಹ ಒಳಗೊಂಡಿರುತ್ತದೆ ಎಂದು ಮಾಹಿತಿ ನೀಡಿದರು.

ಮೇಳವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಮತ್ತಿತರರು ಉದ್ಘಾಟಿಸಲಿದ್ದಾರೆ. ಸರ್ಕಾರ ಈ ಮೇಳಕ್ಕೆ ವಿಶೇಷವಾದ ಒತ್ತು ಕೊಟ್ಟಿದೆ. ಏಕೆಂದರೆ ಬದಲಾವಣೆಯಾಗುವುದಾದರೆ ಅದು ಮಹಿಳೆಯರಿಂದ ಸಾಧ್ಯ ಎಂಬುದು ನಮ್ಮ ಸರ್ಕಾರಕ್ಕೆ ಅರ್ಥವಾಗಿದೆ. ಹಾಗಾಗಿ ಇದಕ್ಕೆ ವಿಶೇಷ ಒತ್ತು ಕೊಟ್ಟಿದ್ದೇವೆ ಎಂದು ಪಾಟೀಲ್ ತಿಳಿಸಿದರು.


ಬೃಹತ್ ಉದ್ಯೋಗ ಮೇಳ: ಈಗಾಗಲೇ ನಿಗದಿಯಾಗಿರುವಂತೆ ಬೆಂಗಳೂರಿನ ಅರಮನೆ ಮೈದಾನದಲ್ಲಿ 22 ದಿನಗಳ ಬೃಹತ್ ಉದ್ಯೋಗ ಮೇಳ ನಡೆಯಲಿದೆ. ಎಂಜಿನಿಯರಿಂಗ್, ಡಿಪ್ಲೊಮಾ, ಐಟಿಐ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳನ್ನು ಮುಗಿಸಿದ ಉದ್ಯೋಗ ಆಕಾಂಕ್ಷಿಗಳಿಗೆ ಒಂದೇ ಸೂರಿನಡಿ ಉದ್ಯೋಗ ಕಲ್ಪಿಸಿಕೊಡುವುದು ನಮ್ಮ ಸರ್ಕಾರದ ಉದ್ದೇಶವಾಗಿದೆ. ಇದಕ್ಕಾಗಿ ನಮ್ಮ ಸಿದ್ಧತೆಗಳು ಮುಕ್ತಾಯ ಹಂತದಲ್ಲಿದೆ ಎಂದು ಮಾಹಿತಿ ನೀಡಿದರು.

ಡಿ.ಕೆ.ಶಿವಕುಮಾರ್ ಮಾತನಾಡಿ, ಈ ರೀತಿಯ ಕರಕುಶಲ ವಸ್ತು ಪ್ರದರ್ಶನ ಬೆಂಗಳೂರಿನಲ್ಲಿ ಇಡೀ ವರ್ಷ ನಡೆಯಲು ಅನುಕೂಲವಾಗುವಂತೆ ಶಾಶ್ವತ ಪ್ರದರ್ಶನ ಕೇಂದ್ರಕ್ಕೆ ಸ್ಥಳಾವಕಾಶ ಕಲ್ಪಿಸಲು ಹುಡುಕಾಟ ನಡೆಯುತ್ತಿದೆ. ಬ್ರಾಂಡ್ ಬೆಂಗಳೂರು ಅಭಿಯಾನದಡಿಯಲ್ಲಿ ಇಂತಹ ಕಾರ್ಯಕ್ರಮ ಆಯೋಜಿಸಲಾಗಿತ್ತಿದೆ ಎಂದರು.

## ತೋಂಟದ ಸಿದ್ಧಲಿಂಗಶ್ರೀಗಳ ದತ್ತಿ ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಫೆ.24ರಂದು ಸಂಜೆ 6 ಗಂಟೆಗೆ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನ, ಕಸಾಪ ಕಾರ್ಯಾಲಯ ಗದಗ ಇಲ್ಲಿ ತೋಂಟದ ಸಿದ್ಧಲಿಂಗಶ್ರೀಗಳ ಸ್ಮರಣಾರ್ಥ ದತ್ತಿ ಉಪನ್ಯಾಸವನ್ನು ಏರ್ಪಡಿಸಲಾಗಿದೆ.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. 'ಕನ್ನಡಕ್ಕೆ ಡಾ. ತೋಂಟದ ಸಿದ್ಧಲಿಂಗಶ್ರೀಗಳ ಕೊಡುಗೆ' ಕುರಿತಾಗಿ ಸಂಸ್ಕೃತಿ ಚಿಂತಕ ಎಸ್.ಎಸ್ ಹರ್ಲಾಪೂರ ಉಪನ್ಯಾಸ ನೀಡುವರು. 'ಕಿತ್ತೂರ ಕರ್ನಾಟಕ' ದಿನಪತ್ರಿಕೆ ಸಂಪಾದಕ ಮಂಜುನಾಥ ಅಬ್ಬಿಗೇರಿ ಇವರಿಗೆ ಸಂಮಾನ ಜರುಗಲಿದೆ. ಮುಖ್ಯ ಅತಿಥಿಗಳಾಗಿ ಜ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಪಾಲ್ಗೊಳ್ಳುವರು. ದತ್ತಿದಾನಿಗಳಾದ ಸುರೇಖಾ ಸದಾನಂದ ಪಿಳ್ಳಿ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಪರಿಷತ್ತಿನ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಬಸವೇಶ್ವರ ಶಾಲೆಯಲ್ಲಿ ಸರ್ವಜ್ಞ ಜಯಂತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

'ಆಡು ಮುಟ್ಟದ ಸೊಪ್ಪಿಲ್ಲ, ಸರ್ವಜ್ಞ ಹೇಳದ ಮಾತಿಲ್ಲ' ಎಂಬ ಉಕ್ತಿಯಂತೆ ತ್ರಿಪದಿ ಕವಿ ಸರ್ವಜ್ಞ ಸರ್ವ ಕ್ಷೇತ್ರಗಳಲ್ಲಿ ಎಲ್ಲರ ಮನಮುಟ್ಟುವಂತೆ ವಿಶ್ವ ಸಂದೇಶ ಸಾರಿದ ಮೇರು ದಾರ್ಶನಿಕರಾಗಿದ್ದಾರೆ. ಸಮಾಜ ಸುಧಾರಣೆಗೆ ಅವರ ಕೊಡುಗೆ ಅಪಾರ ಎಂದು ಮುಖ್ಯ ಶಿಕ್ಷಕಿ ಬಿ.ಜಿ. ಶಿರ್ಸಿ ಹೇಳಿದರು.

ಪಟ್ಟಣದ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಏರ್ಪಡಿಸಿದ್ದ ತ್ರಿಪದಿ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ವಿಶ್ವಕ್ಕೆ ಮಾದರಿಯಾದ ವರಕವಿ ಸರ್ವಜ್ಞ 16ನೇ ಶತಮಾನದ ವಚನಕಾರರು. ಕನ್ನಡದ ತ್ರಿಪದಿ ಸಾಹಿತ್ಯದ ಪ್ರಮುಖ ಕವಿ, ನಿಷ್ಠುರವಾದಿ, ವಾಸ್ತವ ಪ್ರತಿಪಾದಕರಾಗಿ ಸಾಮಾನ್ಯರೊಂದಿಗೆ ಬೆರೆತು ಸಮಾಜದ ಅಂಕು-ಡೊಂಕು ತಿದ್ದಿ, ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ಭೌಗೋಳಿಕ ಸೇರಿದಂತೆ ಪ್ರತಿಯೊಂದು ವಿಷಯದ ಕುರಿತು ತ್ರಿಪದಿಗಳನ್ನು ರಚಿಸಿದ್ದಾರೆ. ಅವರು ತೋರಿದ ಸನ್ಮಾರ್ಗದಲ್ಲಿ ಎಲ್ಲರೂ ಮುನ್ನಡೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಎಸ್.ವಿ. ಹಿರೇಮಠ, ವ್ಹಿ.ಪಿ. ಗ್ರಾಮಪುರೋಹಿತ, ಎಸ್.ಕೆ. ಕುಲಕರ್ಣಿ, ಎಮ್.ವಿ. ಕಡೆತೋಟದ, ವಿ.ಎಸ್. ಜಾದವ್, ಎಸ್.ಎಚ್. ಮಾನ್ವಿ, ಗೀತಾ ಶಿಂಧೆ, ಕೆ.ಆಯ್. ಕೋಳಿವಾಡ, ಆಯ್.ಬಿ. ಒಂಟೆಲಿ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ್, ಅಕ್ಕಮಹಾದೇವಿ, ಗೀತಾ ಕಂಬಳಿ, ರಜಿಯಾ ಬೇಗಂ, ಮಲ್ಲಮ್ಮ ಸಿಳ್ಳಿನ, ವಿದ್ಯಾ ಮುಗಳಿ, ಜಯಶ್ರಿ ಮೆಣಸಗಿ, ನಯನಾ ಜೋಳದ, ವೀಣಾ ಯಾಳಗಿ ಸೇರಿದಂತೆ ಎಲ್ಲ ಸಿಬ್ಬಂದಿ ವರ್ಗದವರು ಇದ್ದರು.

## ನೂತನ ರಾಜ್ಯಾಧ್ಯಕ್ಷರ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸಭೆಯಲ್ಲಿ ಮಾಜಿ ಸಚಿವ ದಿ. ಸಿ.ಎಸ್. ಶಿವಳ್ಳಿಯವರ ಸಹೋದರ ಮುತ್ತಣ್ಣ ಶಿವಳ್ಳಿ ಅವರನ್ನು ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ನೂತನ ರಾಜ್ಯಾಧ್ಯಕ್ಷರನ್ನಾಗಿ ಸಂಸ್ಥಾಪಕ ಅಧ್ಯಕ್ಷ ಎಂ.ಆಯ್. ಮುಳುಗುಂದ ನೇಮಕ ಮಾಡಿದರು.

ಈ ಸಂಧರ್ಭದಲ್ಲಿ ಮಾತನಾಡಿದ ಎಮ್.ಆಯ್. ಮುಳಗುಂದ, ನಿರ್ಗಮಿತ ರಾಜ್ಯಾಧ್ಯಕ್ಷ ಸುರೇಶ ಎಚ್. ಮೇದಾರ ವೇದಿಕೆಗೆ ನೀಡಿದ ಸೇವೆಯನ್ನು ಶ್ಲಾಘಿಸಿ, ಇನ್ನು ಮುಂದೆ ಸುರೇಶ ಮೇದಾರರು ಸಂಸ್ಥಾಪಕ ಉಪಾಧ್ಯಕ್ಷರಾಗಿ ಕಾರ್ಯ ನಿರ್ವಹಿಸಲಿದ್ದಾರೆ ಎಂದರು.

ಮುತ್ತಣ್ಣ ಶಿವಳ್ಳಿ ಮಾತನಾಡಿ, ವೇದಿಕೆಯನ್ನು ಇಲ್ಲಿಯವರೆಗೆ ನಡೆಸಿಕೊಂಡು ಬಂದ ಮಾರ್ಗದಲ್ಲಿಯೇ ನಾನು ಕೂಡಾ ನಡೆಸಿಕೊಂಡು ಹೋಗುತ್ತೇನೆ ಎಂದರು. ರಾಜ್ಯ ಸಂಚಾಲಕ ರಾಜಶೇಖರ ಕಾತರಕಿ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಸಭೆಯಲ್ಲಿ ಆಯ್.ಎನ್. ಹುಬ್ಬಳ್ಳಿ, ಶಾಹುಲ ಹಮೀದ, ವಿಕ್ರಾಂತ ಅಬ್ಬಿಗೇರಿ, ವಿಕಾಸ ಮಿಸ್ಕಿನ, ನೂರುಲ್ಲಾಖಾನ ಪಠಾಣ, ಪ್ರಕಾಶ ಅಣ್ಣಿಗೇರಿ, ಮಂಜು ಅಕ್ಕಿ, ದೇವಪ್ಪ ಮಲ್ಲಸಮುದ್ರ, ಸೋಮಶೇಖರ ಟಣಕೆದಾರ, ನವೀನ ಒಳಗುಂದಿ, ಸುವರ್ಣಾ ನಾಲವಾಡ, ಶಿವಲೀಲಾ ಭಜಂತ್ರಿ, ಆಶಾ ಬಡಿಗೇರ, ಸಾವಿತ್ರಿ ಕಲಾಲ, ಸ್ವಪ್ನಾ ನಾಯಕರ, ಅಕ್ಬರ್ ಬೇಗ್ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

## ವಿಧಾನಸಭೆ ಕಲಾಪ ಸೋಮವಾರಕ್ಕೆ ವಿಸ್ತರಣೆ: ಕಾರ್ಯಕಲಾಪ ಸಲಹಾ ಸಮಿತಿ ಸಭೆಯಲ್ಲಿ ತೀರ್ಮಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೆಲ ಮಸೂದೆಗಳ ಅಂಗೀಕಾರ ಬಾಕಿ ಹಿನ್ನೆಲೆ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸದನದಲ್ಲಿ ಕೆಲವು ಪ್ರಶ್ನೆಗಳಿಗೆ ಉತ್ತರ ನೀಡಲು ಬಾಕಿ ಇರುವುದರಿಂದ ವಿಧಾನಸಭೆ ಕಲಾಪವನ್ನು ಫೆಬ್ರವರಿ 26 ಸೋಮವಾರದವರೆಗೆ ಮುಂದೂಡಲಾಗಿದೆ.

ಪೂರ್ವ ನಿಗದಿ ಪ್ರಕಾರ ವಿಧಾನಸಭೆ ಕಲಾಪ ಇಂದಿಗೆ ಮುಕ್ತಾಯವಾಗಬೇಕಿತ್ತು. ಆದರೆ ಕೆಲವು ಪ್ರಮುಖ ಮಸೂದೆಗಳ ಮೇಲಿನ ಚರ್ಚೆ, ಅಂಗೀಕಾರ ಬಾಕಿಯಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಅನಾರೋಗ್ಯವಿರುವುದರಿಂದ ಕಲಾಪದಲ್ಲಿ ಸರಿಯಾಗಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಅವರು ನಾಳೆ ಮತ್ತು ನಾಡಿದ್ದು ವಿಶ್ರಾಂತಿ ತೆಗೆದುಕೊಂಡು ಸೋಮವಾರ ಸದನದಲ್ಲಿ ಕಲಾಪಕ್ಕೆ ಹಾಜರಾಗಲಿದ್ದಾರೆ.

ಇಂದು ನಡೆದ ವಿಧಾನಸಭೆ ಕಾರ್ಯಕಲಾಪ ಸಲಹಾ ಸಮಿತಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು.ಸಭಾಪತಿ ಯು.ಟಿ. ಖಾದರ್ ನೇತೃತ್ವದಲ್ಲಿ ಇಂದು ವಿಧಾನಸಭೆ ಕಾರ್ಯ ಕಲಾಪ ಸಲಹಾ ಸಮಿತಿ ಸಭೆ ನಡೆದಿದ್ದು, ಸಭೆಯಲ್ಲಿ ಸೋಮವಾರ ಒಂದು ದಿನಕ್ಕೆ ವಿಧಾನಸಭೆ ಕಲಾಪ ನಡೆಸುವ ಮತ್ತು ಮಂಗಳವಾರ ರಾಜ್ಯಸಭಾ ಚುನಾವಣೆ ನಡೆಸುವ ನಿರ್ಣಯ ಕೈಗೊಳ್ಳಲಾಗಿದೆ. ಹೀಗಾಗಿ ಅಂದು ಕಲಾಪ ನಡೆಯುವುದಿಲ್ಲ.

ಇನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆ.26 ರಂದು ಬೆಳಗ್ಗೆ 9:30ಕ್ಕೆ ಬಜೆಟ್ ಮೇಲಿನ ಚರ್ಚೆಗೆ ಉತ್ತರ ನೀಡಲಿದ್ದಾರೆ. ಸಭೆಯಲ್ಲಿ ವಿಪಕ್ಷ ನಾಯಕ ಆರ್. ಅಶೋಕ್, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್ ಸೇರಿದಂತೆ ಇತರೆ ಬಿಎಸಿ ಸದಸ್ಯರು ಭಾಗಿಯಾಗಿದ್ದರು.

## ಅಂತರ ಜಿಲ್ಲಾ ಮನೆ ಕಳ್ಳನ ಬಂಧನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಫೆ.9ರಂದು ನಡೆದ ಮನೆಗಳ್ಳತನಕ್ಕೆ ಸಂಬಂಧಿಸಿದ ಪ್ರಕರಣವನ್ನು ಭೇದಿಸಿ, ಆರೋಪಿಯನ್ನು ಪತ್ತೆಹಚ್ಚುವಲ್ಲಿ ಇಲಾಖೆಯ ಅಧಿಕಾರಿಗಳು ಯಶಸ್ವಿಯಾಗಿದ್ದಾರೆ.

ಫೆ.9ರಂದು ಮುಂಜಾನೆ 10 ಗಂಟೆಯಿಂದ ಮಧ್ಯಾಹ್ನ 1-30ರ ನಡುವಿನ ಅವಧಿಯಲ್ಲಿ ಫಿರ್ಯಾದಿದಾರರಾದ ಬ್ಯಾಂಕರ್ಸ್ ಕಾಲೋನಿಯ ಶಾಂತಾ ಚವಡಿ ಮತ್ತು ವೀರೇಶ್ವರ ನಗರದ ಲಲಿತಾ ಬಂಡಿ ಇವರ ಮನೆಗಳನ್ನು ಯಾರೋ ಕಳ್ಳರು ಹಗಲು ಸಮಯದಲ್ಲಿ ಮನೆ ಕಳ್ಳತನ ಮಾಡಿಕೊಂಡು ಹೋದ ಬಗ್ಗೆ ಗದಗ ಶಹರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ. 06/2024 ಮತ್ತು 08/2024



ಕಲಂ. 454, 380 ಐಪಿಸಿ ಪ್ರಕಾರ ಪ್ರಕರಣ ದಾಖಲಾಗಿತ್ತು.

ಈ ಎರಡು ಪ್ರಕರಣಗಳನ್ನು ಭೇದಿಸುವ ಕುರಿತು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಮ್.ಬಿ. ಸಂಕದ, ಪೊಲೀಸ್ ಉಪಾಧೀಕ್ಷಕ ಜೆ.ಹೆಚ್. ಇನಾಂದಾರ್ ಅವರ ಮಾರ್ಗದರ್ಶನದಲ್ಲಿ ಗದಗ ಶಹರ ಠಾಣೆಯ ಪಿಎಸ್‌ಐ ಡಿ.ಬಿ. ಪಾಟೀಲ್, ಹೆಚ್.ಕೆ. ಪಾಟೀಲ್, ಸಿಬ್ಬಂದಿಗಳಾದ ವಾಯ್.ಬಿ. ಪಾಟೀಲ್, ಗುರು ಬೂದಿಹಾಳ(ಟೆಕ್ನಿಕಲ್ ಸೆಲ್), ಎಸ್.ಎಸ್. ಮಾವಿನಕಾಯಿ, ಯು.ಎಫ್. ಸುಣಗಾರ, ಎಮ್.ಬಿ. ವಡ್ಡಟ್ಟಿ, ಪ್ರವೀಣ ಕಲ್ಲೂರ, ಕೆ.ಡಿ. ಜಮಾದಾರ, ಪಿ.ಬಿ. ಮೂಲಿಮನಿ, ಪಿ.ಎ. ಭರಮಗೌಡ್ರ, ಸಂಜೀವ ಕೊಡುರ(ಟೆಕ್ನಿಕಲ್ ಸೆಲ್) ಇವರುಗಳು ಫೆ.22ರಂದು ಸದರಿ ಪ್ರಕರಣವನ್ನು ಪತ್ತೆ ಮಾಡಿದ್ದಾರೆ.

ಪ್ರಕರಣದಲ್ಲಿ ಆರೋಪಿತನಾದ ವಿಜಯನಗರ ಜಿಲ್ಲೆಯ ಕೂಡ್ಲಿಗಿಯ ರಾಜು @ ಪೋತರಾಜ @ ಸದ್ದಾಂಹುಸೇನ @ ಗೌತಮರಾಜ ತಂದೆ ಚನ್ನಪ್ಪ @ ಬಾಲಪ್ಪ ಕುಪ್ಪಿನಕೇರಿ ಇವನನ್ನು ವಶಕ್ಕೆ ಪಡೆದು ಸದರಿ ಪ್ರಕರಣದಲ್ಲಿ ಕಳ್ಳತನವಾದ ಒಟ್ಟು 2,71,000 ರೂ. ಕಿಮ್ಮತ್ತಿನ 76 ಗ್ರಾಂ ತೂಕದ ಬಂಗಾರದ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ.

ಆರೋಪಿತರ ಪತ್ತೆ ಕಾರ್ಯದಲ್ಲಿ ಯಶಸ್ವಿಯಾದ ಅಧಿಕಾರಿ ಮತ್ತು ಸಿಬ್ಬಂದಿಗಳ ಕಾರ್ಯವನ್ನು ಜಿಲ್ಲಾ ಆರಕ್ಷಕ ಅಧೀಕ್ಷಕ ಬಿ.ಎಸ್. ನೇಮಗೌಡ ಪ್ರಶಂಸಿಸಿದ್ದಾರೆ.

## ಹಿಂದೂ ಧಾರ್ಮಿಕ ದತ್ತಿ ಮಸೂದೆಗೆ ವಿಧಾನ ಪರಿಷತ್‌ನಲ್ಲಿ ಸೋಲು: ಸರ್ಕಾರಕ್ಕೆ ಮುಖಭಂಗ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪ್ರತಿಪಕ್ಷಗಳ ಭಾರೀ ವಿರೋಧದ ನಡುವೆಯೇ ವಿಧಾನಸಭೆಯಲ್ಲಿ ಅಂಗೀಕಾರಗೊಂಡಿದ್ದ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳ ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ವಿಧೇಯಕ-2024 ಅನ್ನು ವಿಧಾನ ಪರಿಷತ್‌ನಲ್ಲಿ ಶುಕ್ರವಾರ ತಿರಸ್ಕರಿಸಲಾಗಿದೆ. ಇದರಿಂದ ಕಾಂಗ್ರೆಸ್ ಸರ್ಕಾರಕ್ಕೆ ತೀವ್ರ ಮುಖಭಂಗವಾಗಿದ್ದು, ಪ್ರತಿಪಕ್ಷ ಬಿಜೆಪಿ ಜೈ ಶ್ರೀರಾಮ ಘೋಷಣೆ ಕೂಗಿ ಸಂಭ್ರಮಿಸಿದೆ.

ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ಹಿಂದೂ ಧಾರ್ಮಿಕ ಸಂಸ್ಥೆಗಳ ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ಮಸೂದೆಯನ್ನು ವಿಧಾನ ಇಂದು ಪರಿಷತ್ ನಲ್ಲಿ ಮಂಡಿಸಿದರು.



ತಿದ್ದುಪಡಿ ವಿಧೇಯಕ ಮಂಡಿಸಿ ಮಾತನಾಡಿದ ರಾಮಲಿಂಗಾರೆಡ್ಡಿ ಅವರು, 2003ರಿಂದ ವಿಧೇಯಕ ಜಾರಿಯಲ್ಲಿದೆ. 2003ರ ಮೇ 1 ರಿಂದ ದೇವಸ್ಥಾನಗಳಿಂದ ನಿಧಿ ಸಂಗ್ರಹಿಸಲಾಗುತ್ತಿದೆ. ಈಗಿರುವ ನಿಯಮದಂತೆ ಸರ್ಕಾರಕ್ಕೆ 8 ಕೋಟಿ ರೂ. ಸಲ್ಲಿಕೆ ಆಗುತ್ತಿದೆ ಎಂದರು. ಈಗಿನ ಸಾಮಾನ್ಯ ಸಂಗ್ರಹಣ ನಿಧಿಯಿಂದ ಧಾರ್ಮಿಕ ಕೆಲಸ ಮಾಡಲಾಗಲ್ಲ. ಹೊಸ ನಿಯಮದಿಂದ 60 ಕೋಟಿ ರೂಪಾಯಿ ಹಣ ಸಂಗ್ರಹ ಆಗುತ್ತದೆ. ಸಿ ದರ್ಜೆಯ ದೇಗುಲಗಳನ್ನು ನಿರ್ವಹಿಸಲು ಇದರಿಂದ ಸಾಧ್ಯವಾಗುತ್ತದೆ ಎಂದರು.

ವಿಧೇಯಕದಲ್ಲಿದ್ದ ತಿದ್ದುಪಡಿ ಅಂಶಗಳಿಗೆ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ತೀವ್ರ ಆಕ್ಷೇಪ ಮತ್ತು ವಿರೋಧವನ್ನು ವ್ಯಕ್ತಪಡಿಸಿದರು. ಒಂದು ಕೋಟಿಗಿಂತಲೂ ಹೆಚ್ಚು ಆದಾಯ ಇರುವ ದೇವಸ್ಥಾನಗಳ ಒಟ್ಟು ಆದಾಯದಿಂದ ಶೇಕಡ 10% ರಷ್ಟು ನಿಧಿ ಸಂಗ್ರಹಣೆ ಮಾಡುವ ನಿರ್ಧಾರವನ್ನು ಕೈಬಿಡಬೇಕು ಎಂದು ಬಿಜೆಪಿ ಸದಸ್ಯರು ಆಗ್ರಹಿಸಿದರು.

ಪರ-ವಿರೋಧದ ಚರ್ಚೆಯ ಬಳಿಕ ಉಪ ಸಭಾಪತಿ ಪ್ರಾಣೇಶ್ ಅವರು ತಿದ್ದುಪಡಿ ವಿಧೇಯಕವನ್ನು ಧ್ವನಿ ಮತಕ್ಕೆ ಹಾಕಿದರು. ವಿಧೇಯಕದ ಪರವಾಗಿ ಏಳು ಮತಗಳು ಚಲಾವಣೆಯಾದರೆ, ವಿಧೇಯಕದ ವಿರುದ್ಧವಾಗಿ 18 ಮತಗಳು ಚಲಾವಣೆಯಾದವು. ಇದರೊಂದಿಗೆ ಸರ್ಕಾರ ಮಂಡಿಸಿದ್ದ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳ ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ವಿಧೇಯಕ ಪರಿಷತ್ ನಲ್ಲಿ ತಿರಸ್ಕೃತಗೊಂಡಿದೆ.

## ನೀರು ಪೂರೈಕೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆಯ ಸಗಟು ನೀರು ಸರಬರಾಜು ಮಾಡುವ ಹಮ್ಮಿಗಿ ಜಾಕವೆಲ್‌ನಿಂದ ಬರದೂರ ಗ್ರಾಮದವರೆಗೂ ಹಾಗೂ ಚಿಕ್ಕಟ್ಟಿ ಶಾಲೆ ಎದುರಿನ ಎನ್‌ಎಚ್‌ಎಐ ಹೆದ್ದಾರಿಯ ಪಕ್ಕದಲ್ಲಿ ಹಲವು ಭಾಗಗಳ ನೀರು ಪೂರೈಕೆಯ ಮುಖ್ಯ ಕೊಳವೆ ಮಾರ್ಗಗಳಲ್ಲಿ ದುರಸ್ತಿ ಇರುವುದರಿಂದ ಫೆ.24ರಂದು ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ದುರಸ್ತಿ ನಂತರದಲ್ಲಿ ನೀರು ಪೂರೈಕೆ ಯಥಾವತ್ತಾಗಿ ಮಾಡಲಾಗುವುದು. ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಬಿಗ, ಸುಣಗಾರ ಸಮಾಜದವರಿಗೆ ನೆರವಾಗಿ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ವಿವಿಧ ಬಡಾವಣೆಯಲ್ಲಿ ಅಂಬಿಗ, ಸುಣಗಾರ ಸಮಾಜದ ನೂರಾರು ಬಡ ಕುಟುಂಬದವರು ಬಹಳ ವರ್ಷ ಬಾಡಿಗೆ ಮನೆಯಲ್ಲಿ ವಾಸವಿದ್ದು, ದಿನಗೂಲಿ ಮಾಡಿ ಜೀವನ ಸಾಗಿಸುವುದು ಕಷ್ಟವಾಗಿದೆ. ಮೂಲ ವೃತ್ತಿಯಾದ ಸುಣ್ಣದ ವ್ಯಾಪಾರ ಕಮ್ಮಿಯಾಗಿದ್ದು, ಜೀವನ ಸಾಗಿಸುವುದು ಕಷ್ಟವಾಗಿದೆ. ಹೀಗಾಗಿ, ಸರ್ಕಾರದಿಂದ ಮನೆ ಇಲ್ಲದ ಬಡ ಕುಟುಂಬಗಳಿಗೆ ಮನೆ ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಲ್ಲಿ ಅಂಬಿಗರ ಸಮಾಜ ಟ್ರಸ್ಟ್ ಪ್ರಧಾನ ಕಾರ್ಯದಶಿ ಸಂಗಮೇಶ ಹಾದಿಮನಿ ಮನವಿ ಮಾಡಿದ್ದಾರೆ.

ಮಕ್ಕಳು ವಿದ್ಯಾಭ್ಯಾಸ ಬಿಟ್ಟು ಮನೆಯ ನಿರ್ವಹಣೆಗೆ ಕೆಲಸಕ್ಕೆ ಹೋಗಿ ಬಾಡಿಗೆ ಕಟ್ಟಿ ಜೀವನದ ಹೊಸ ಆಸೆಗಳೇ ಬತ್ತಿ ಹೋಗಿವೆ. ಬಹಳ ವರ್ಷದಿಂದ ಯುವಕರು ಕುಟುಂಬ ಬಿಟ್ಟು ದುಡಿಯಲು ದೂರದ ಊರುಗಳಿಗೆ ಗುಳೇ ಹೋಗುತ್ತಿದ್ದು, ಮೂಲ ವೃತ್ತಿಯಾದ ಮೀನುಗಾರಿಕೆ, ದೋಣಿ ನಡೆಸುವುದು, ಸುಣ್ಣದ ವ್ಯಾಪಾರ ಕಣ್ಮರೆ ಆಗಿರುವುದು ವಿಷಾದನೀಯ. ಮೂಲ ವೃತ್ತಿ ಅಭಿವೃದ್ಧಿಪಡಿಸಲು ಸಹಾಯಹಸ್ತ ನೀಡಿ ಸುಣಗಾರ, ಅಂಬಿಗ ಸಮಾಜದ ಜನರ ಬದುಕಿಗೆ ಆಸರೆ ಆಗಬೇಕೆಂದು ಅವರು ವಿನಂತಿಸಿದ್ದಾರೆ.

### ಪಾಲಕರ ಸಭೆಯ ಸಾನ್ನಿಧ್ಯ ವಹಿಸಿದ ಮಲ್ಲಿಕಾರ್ಜುನ ಶ್ರೀಗಳ ಅಭಿಮತ

# ಪಾಲಕರ ತ್ಯಾಗದಲ್ಲಿ ಮಕ್ಕಳ ಭವಿಷ್ಯ ಅಡಗಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಾಲಕರು ತಮ್ಮ ಮಕ್ಕಳ ಭವಿಷ್ಯಕ್ಕಾಗಿ ಹಗಲಿರುಳೂ ಶ್ರಮಿಸುತ್ತಾರೆ. ತಮ್ಮ ನೋವನ್ನು ಮುಚ್ಚಿಟ್ಟು ಮಕ್ಕಳ ನಲಿವಿಗಾಗಿ ಅವರು ಏನೆಲ್ಲವನ್ನೂ ತ್ಯಾಗ ಮಾಡಲು ಮುಂದಾಗುತ್ತಾರೆ. ಪಾಲಕರ ತ್ಯಾಗದಲ್ಲಿ ಮಕ್ಕಳ ಭವಿಷ್ಯ ಅಡಗಿದೆ ಎಂದು ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಪಟ್ಟಣದ ಶ್ರೀ ಜಗದ್ಗುರು ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆಯ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಪಾಲಕರ ಸಭೆಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಪ್ರತಿ ಮಕ್ಕಳ ತಾಯಂದಿರು ಮಕ್ಕಳಿಗೆ ಸಂಸ್ಕಾರ ನೀಡಿದರೆ, ತಂದೆ ಆರ್ಥಿಕ ಸಹಾಯದ ಹಸ್ತ ಚಾಚುತ್ತಾನೆ. ಇದರಿಂದ ಮಕ್ಕಳು ಮಾನಸಿಕ ನೆಮ್ಮದಿಯೊಂದಿಗೆ ಶೈಕ್ಷಣಿಕ ಪ್ರಗತಿ ಹೊಂದಲು ಸಹಕಾರಿಯಾಗಲಿದೆ. ಇಲ್ಲಿನ ಮಕ್ಕಳು ನೈತಿಕ ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಯಲ್ಲಿಯೂ ತಮ್ಮ ಪ್ರತಿಭೆಯನ್ನು ತೋರ್ಪಡಿಸುತ್ತಿರುವುದು



ಶ್ಲಾಘನೀಯವಾಗಿದೆ. ಇಂದಿನ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಮಕ್ಕಳು ಹಿಂದಿನ ಕಾಲದ ವಸ್ತುಗಳನ್ನು ಸಂಗ್ರಹಿಸಿ ಕಾಲಕ್ಕನುಗುಣವಾಗಿ ಬದಲಾದ ಅವುಗಳ ವಿವಿಧ ಮಾದರಿಗಳನ್ನು ಪ್ರದರ್ಶಿಸಿದ್ದಾರೆ.

ನೀರಿನ ಸದ್ಬಳಕೆ, ತ್ಯಾಜ್ಯಗಳಿಂದ ವಿದ್ಯುತ್ ಉತ್ಪಾದನೆ, ರಾಮಮಂದಿರ, ಮತ್ತು ಭಾರತ ದೇಶದ ವಿವಿಧ ರಾಜ್ಯಗಳಲ್ಲಿನ ಆಹಾರ ಪದಾರ್ಥಗಳ ಉತ್ಪಾದನೆಯಂತಹ ವಿವಿಧ ಮಾದರಿಯ ವಸ್ತುಪ್ರದರ್ಶನದ ಮೂಲಕ ತಮ್ಮ ವಿಚಾರಶಕ್ತಿಯನ್ನು ಅಭಿವ್ಯಕ್ತಗೊಳಿಸಿದ್ದಾರೆ. ಪಾಲಕರಾದವರು ಸಾಧ್ಯವಾದಷ್ಟು ಅವರೊಂದಿಗೆ ಹರ್ಷದಿಂದ ಇದ್ದು ಶುಚಿತ್ವದಿಂದ ಉತ್ತಮ ಸಂಸ್ಕಾರಿತ ಚಾರಿತ್ರ್ಯತೆಂಯುಳ್ಳವರನ್ನಾಗಿ ಮಾಡುವುದರಿಂದ ಈ ದೇಶದ ಉತ್ತಮ ಪ್ರಜೆಯಾಗಿ ಉನ್ನತ ಸ್ಥಾನಮಾನಗಳನ್ನು ಪಡೆಯಲು ಸಾಧ್ಯವಾಗುತ್ತೆಂದು ಶ್ರೀಗಳು ತಿಳಿಸಿದರು.

> ನರೇಗಲ್ಲ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತಕ್ಕ ಮಾತನಾಡಿ, ಮಕ್ಕಳಿಗೆ ಶಿಕ್ಷಣ ಎಷ್ಟು ಮುಖ್ಯವೋ ಆಧ್ಯಾತ್ಮದ ಚಿಂತನೆಯೂ ಅಷ್ಟೇ ಮುಖ್ಯ. ಪ್ರತಿನಿತ್ಯ ವಿದ್ಯಾರ್ಥಿಗಳು ಧ್ಯಾನ, ವ್ಯಾಯಾಮ, ಕ್ರೀಡಾ ಚಟುವಟಿಕೆ ಬೆಳಸಿಕೊಂಡಲ್ಲಿ ಮನೋಬಲ, ಆತ್ಮಬಲ ವೃದ್ಧಿಗೊಳ್ಳಲು ಸಹಕಾರಿಯಾಗಲಿದೆ. ಇಂದಿನ ಮಕ್ಕಳೇ ನಾಳೆಯ ಪ್ರಜೆಗಳಾಗಲಿದ್ದು, ಸದಾ ಅಧ್ಯಯನದ ಮೂಲಕ ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಬಾಳಿರಿ ಎಂದರು.

ವಿಜ್ಞಾನ ವಸ್ತು ಪ್ರದರ್ಶನದ ನಿರ್ಣಾಯಕರಾಗಿ ಪಾಲ್ಗೊಂಡ ಬಸವರಾಜ ಕುರಿ ಮಾತನಾಡಿ, ಪ್ರಾಥಮಿಕ ಶಾಲಾ ಹಂತದ ಮಕ್ಕಳಿಗೆ ಇಂತಹ ವಿಜ್ಞಾನ ವಸ್ತು ಪ್ರದರ್ಶನ ಆಯೋಜನೆ ಮಾಡುವದರಿಂದ ಅವರಲ್ಲಿನ ಪ್ರತಿಭೆಯನ್ನು ಗುರುತಿಸಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಅತಿಥಿಗಳಾಗಿ ಸಂಸ್ಥೆಯ ಉಪಾಧ್ಯಕ್ಷ ಎಸ್.ಕೆ. ಪಾಟೀಲ, ಕಾರ್ಯದರ್ಶಿ ಈಶ್ವರ ಬೆಟಗೇರಿ, ಡಾ. ಆರ್.ಕೆ. ಗಚ್ಚಿನಮಠ, ಶರಣಪ್ಪ ಜುಟ್ಲದ ಹಾಗೂ ಮುಖ್ಯೋಪಾಧ್ಯಾಯೆ ನಿರ್ಮಲಾ ಹಿರೇಮಠ ಉಪಸ್ಥಿತರಿದ್ದರು. ಪಾಲಕರಿಗಾಗಿ ಆಟೋಟದ ಸ್ಪರ್ಧೆ ನಡೆಸಿಕೊಟ್ಟ ದೈಹಿಕ ಶಿಕ್ಷಕ ಆರ್.ಎಸ್. ನರೇಗಲ್ಲ, ವಿ.ಎ. ಕುಂಬಾರವರನ್ನು ಸನ್ಮಾನಿಸಲಾಯಿತು.

ವಿವಿಧ ಕ್ರೀಡಾ ಚಟುವಟಿಕೆಯಲ್ಲಿ ವಿಜೇತರಾದ ಮಕ್ಕಳಿಗೆ ಹಾಗೂ ಪಾಲಕರಿಗೆ ಬಹುಮಾನ ವಿತರಿಸಲಾಯಿತು. ಎ.ಎಮ್. ಬೆಟಗೇರಿ ಸ್ವಾಗತಿಸಿದರು. ಈಶ್ವರ ಆದಿ ನಿರೂಪಿಸಿದರು. ವಿಜಯಲಕ್ಷ್ಮೀ ಬಿಂಗಿ ವಂದಿಸಿದರು.

### ಜಿಲ್ಲಾಧಿಕಾರಿಗಳಿಂದ ವಿದ್ಯಾರ್ಥಿಗಳಿಗೆ ರಾಗಿ ಮಾಲ್ಟ್ ವಿತರಣೆ

# ಸದೃಢ ದೇಹದಲ್ಲಿ ಸದೃಢ ಮನಸ್ಸು



■ವಿಜಯಸಾಕ್ಷಿ ಸುದ್ದಿ, ಗದಗ

ಹೆಚ್ಚಿನ ಪೋಷಕಾಂಶ ಹೊಂದಿರುವ ರಾಗಿ ಮಾಲ್ಟ್ ಸೇವಿಸುವುದರಿಂದ ಮಕ್ಕಳಲ್ಲಿರುವ ಅಪೌಷ್ಟಿಕತೆ ಮತ್ತು ಅನೇಮಿಯಾವನ್ನು ನಿವಾರಿಸಬಹುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಹೇಳಿದರು.

ಇಲ್ಲಿನ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲಾ ಮಕ್ಕಳಿಗೆ ರಾಗಿ ಮಾಲ್ಟ್ ವಿತರಿಸಿ ಮಾತನಾಡಿದ ಅವರು, ಸದೃಢ ದೇಹದಲ್ಲಿ ಸದೃಢ ಮನಸ್ಸು ಇರುವುದರಿಂದ ಮಕ್ಕಳು ದೈಹಿಕ ಮತ್ತು ಮಾನಸಿಕವಾಗಿ ಸದೃಢವಾಗಲು ರಾಗಿ ಮಾಲ್ಟ್ ಅತ್ಯವಶಕ. ರಾಗಿ ಮಾಲ್ಟ್ ಸೇವಿಸುವದರಿಂದ ಮಕ್ಕಳ ಆರೋಗ್ಯ ಉತ್ತಮವಾಗಿ, ಹೆಚ್ಚು ಕ್ರಿಯಾಶೀಲರಾಗಿ ಪಠ್ಯ–ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಲು ಸಹಕಾರಿಯಾಗಿದೆ ಎಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ಮಾತನಾಡಿ, ಸರ್ಕಾರದ ಯೋಜನೆಯನ್ನು ಶಾಲಾ ಮಕ್ಕಳು ಸದುಪಯೋಗ ಪಡೆದುಕೊಂಡು ಕಲಿಕೆಯಲ್ಲಿ ಉತ್ತಮ ಸಾಧನೆ ಮಾಡಬೇಕೆಂದು ತಿಳಿಸಿದರು.

ಶಿಕ್ಷಣಾಧಿಕಾರಿ ಎಸ್.ಡಿ. ಕನವಳ್ಳಿ ಮಾತನಾಡಿ, ಸಿರಿಧಾನ್ಯಗಳ ರಾಜನೆಂದು ಕರೆಯುವ ರಾಗಿ ಅತಿಹೆಚ್ಚು ಪೋಷಕಾಂಶಗಳನ್ನು ಹೊಂದಿದ್ದು, ವಿದ್ಯಾರ್ಥಿಗಳು ರಾಗಿ ಮಾಲ್ಟ್ ಸೇವಿಸುವದರಿಂದ ರೋಗ ನಿರೋಧಕ ಶಕ್ತಿ ಹೆಚ್ಚಾಗಿ, ವಿವಿಧ ವಿಟಮಿನ್‌ಗಳ ಕೊರತೆಯಿಂದ ಬರುವ ಖಾಯಿಲೆಗಳನ್ನು ತಡೆಗಟ್ಟಬಹುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯೆ ವಿದ್ಯಾ ಗಡಗಿ, ಬಸವರಾಜ ಧಾರವಾಡ, ಜಿಲ್ಲಾ ಶಿಕ್ಷಣ ಹಾಗೂ ತರಬೇತಿ ಸಂಸ್ಥೆಯ ಪ್ರಾಚಾರ್ಯ ಜಿ.ಎಲ್. ಬಾರಟಕ್ಕೆ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ಜಿನಗಾ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ಎಸ್. ಬುರಡಿ, ವಿ.ವಿ. ನಡುವಿನಮನಿ, ಎಮ್.ಎ. ಮಾಡಲಗೇರಿ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ ಸೇರಿದಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರು, ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

### ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ 'ರಾಷ್ಟ್ರೀಯ ರಸ್ತೆ ಸುರಕ್ಷತಾ ದಿನಾಚರಣೆ'

# ರಸ್ತೆ ನಿಯಮಗಳನ್ನು ತಪ್ಪದೇ ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಸ್ತೆ ಸುರಕ್ಷತೆ ಮತ್ತು ನಿಯಮಗಳನ್ನು ಪಾಲನೆ ಮಾಡಿದರೆ ಅಪಘಾತ ಹಾಗೂ ಇನ್ನಿತರ ಹಾನಿಗಳನ್ನು ತಡೆಗಟ್ಟಲು ಸಾಧ್ಯವಿದೆ. ಮೊದಲು ವಿದ್ಯಾರ್ಥಿಗಳು ಜಾಗೃತರಾಗಿ ಎಂದು ಬೆಟಗೇರಿ ಬಡಾವಣೆ ಠಾಣೆಯ ಸಿಪಿಐ ಧೀರಜ್ ಶಿಂಧೆ ಹೇಳಿದರು.

ನಗರದ ಕೆಎಲ್‌ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಶುಕ್ರವಾರ ಜರುಗಿದ 'ರಾಷ್ಟ್ರೀಯ ರಸ್ತೆ ಸುರಕ್ಷತಾ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ವಾಹನಗಳನ್ನು ಓಡಿಸುವ ಮುನ್ನ ವಾಹನ ಪರವಾನಗಿ, ವಾಹನ ವಿಮೆ, ದಾಖಲಾತಿಗಳನ್ನು ಹೊಂದಿರಬೇಕು. ಅಲ್ಲದೆ, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಸಂಚಾರ ನಿಯಮಗಳನ್ನು ಪಾಲನೆ ಮಾಡುವುದರಿಂದ ಹೆಚ್ಚಿನ ಅನುಕೂಲವಾಗುತ್ತದೆ. ಅಮೂಲ್ಯವಾದ ಜೀವಗಳನ್ನು ಉಳಿಸಲು ಸಾಧ್ಯವಿದೆ. ಇತ್ತೀಚಿನ ದಿನಗಳಲ್ಲಿ ರಸ್ತೆಗಳಲ್ಲಿ ಹೆಚ್ಚಿನ ವಾಹನಗಳ ಸಂಚಾರದಿಂದ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ. ಇದನ್ನು ತಪ್ಪಿಸಲು ರಸ್ತೆ ಸುರಕ್ಷತೆ ನಿಯಮಗಳನ್ನು ಪಾಲನೆ ಮಾಡುವುದು ಮುಖ್ಯ. ಈ ಹಿನ್ನೆಲೆಯಲ್ಲಿ ಶಾಲಾ–ಕಾಲೇಜು ಹಂತದಿಂದಲೇ ರಸ್ತೆ ಸುರಕ್ಷತೆ ನಿಯಮಗಳ ಬಗ್ಗೆ ತಿಳುವಳಿಕೆ ಮೂಡಿಸಿದರೆ ಹೆಚ್ಚು ಸಹಕಾರಿಯಾಗುತ್ತದೆ ಎಂದರು.

ಗದಗ ಸಂಚಾರಿ ಪೊಲೀಸ್ ಠಾಣೆಯ ಪಿಎಸ್‌ಐ ಶಕುಂತಲಾ ನಾಯ್ಕ, ಕಾಲೇಜಿನ ಪ್ರಾಚಾರ್ಯ ಜೈಹನುಮಾನ ಎಚ್.ಕೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕರಾದ ಡಾ. ವಿಜಯ ಮುರದಂಡೆ, ಡಾ. ಸಂತೋಷ ಪಾಟೀಲ, ಡಾ. ಜ್ಯೋತಿ ಸಿ.ವಿ., ಎಸ್.ಟಿ. ಮುರಶಿಳ್ಳಿನ, ಶರತ್ ಡಿ ಹಾಗೂ ಪೊಲೀಸ್ ಸಿಬ್ಬಂದಿಗಳು ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ದೈಹಿಕ ನಿರ್ದೇಶಕ ಡಾ. ಸಿ.ಬಿ. ರಣಗಟ್ಟಿಮಠ ಸ್ವಾಗತಿಸಿದರು.

> ರಸ್ತೆ ಸುರಕ್ಷತೆ ಬಗ್ಗೆ ಇರುವ ನಿಯಮಗಳನ್ನು ಪಾಲನೆ ಮಾಡಿದರೆ ಬಹಳಷ್ಟು ಅಪಘಾತಗಳನ್ನು ತಡೆಗಟ್ಟಲು ಸಾಧ್ಯವಿದೆ. ಅಲ್ಲದೆ, ಎಲ್ಲರೂ ರಸ್ತೆಯ ನಿಯಮಗಳ ಬಗ್ಗೆ ಅರಿವು ಹೊಂದಿ ವಾಹನ ಚಾಲನೆ ಮಾಡಬೇಕು. ಪಾದಚಾರಿಗಳು ಸಹ ರಸ್ತೆ ದಾಟುವಾಗ ವಾಹನಗಳು ಬರುತ್ತಿರುವುದನ್ನು ನೋಡಿ, ಸಿಗ್ನಲ್‌ಗಳನ್ನು ಗಮನಿಸಿ, ವಿದ್ಯಾರ್ಥಿಗಳು 18 ವರ್ಷ ತುಂಬಿದ ಬಳಿಕ ವಾಹನ ಚಾಲನೆ ಪರವಾನಗಿ ಪಡೆದು, ಸವಾರಿ ಮಾಡುವುದು ಒಳಿತು ಎಂದು ಧೀರಜ್ ಶಿಂಧೆ ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳಾದ ಸ್ಪರ್ಶ ಜೈನ್ ಪ್ರಾರ್ಥಿಸಿದರು. ಚೆನ್ನಬಸಪ್ಪ ನಿರೂಪಿಸಿದರು. ಮುಕ್ತಾ ಹಡಪದ ವಂದಿಸಿದರು.

### ಬೆಂಗಳೂರ ಪ್ರತಿಬಿಂಬ ಸಂಸ್ಥೆಯಿಂದ ಕ್ರೀಡಾ ಸಾಮಗ್ರಿ, ಎಲ್‌ಇಡಿ ಟಿವಿ ವಿತರಣೆ

# ಕಲಿತ ಶಾಲೆ, ಕಲಿಸಿದ ಗುರುಗಳ ಋಣ ತೀರಿಸಿ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕಲಿತ ಶಾಲೆ, ಕಲಿಸಿದ ಗುರು, ಹೆತ್ತ ತಂದೆ–ತಾಯಿ ಸಮಾಜದ ಋಣ ತೀರಿಸಬೇಕು ಎಂದು ಹಿರಿಯ ಪತ್ರಕರ್ತ ಹನಮೇಶ ಯಾವಗಲ್ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಬೆಂಗಳೂರ ಪ್ರತಿಬಿಂಬ ಸಂಸ್ಥೆಯಿಂದ ಕ್ರೀಡಾ ಸಾಮಗ್ರಿ, ಎಲ್‌ಇಡಿ ಟಿವಿ ವಿತರಿಸಿ ಮಾತನಾಡಿದರು.

ಅಂದಿನ ಶಿಕ್ಷಣಕ್ಕೂ ಇಂದಿನ ಶಿಕ್ಷಣಕ್ಕೂ ತುಂಬಾ ವ್ಯತ್ಯಾಸವಿದ್ದು, ಇಂದಿನ ಆಧುನಿಕ ತಂತ್ರಜ್ಞಾನ ಯುಗದಲ್ಲಿ ಮಕ್ಕಳು ತುಂಬಾ ಜಾಣರಾಗುತ್ತಿದ್ದಾರೆ. ಉತ್ತಮ ಶಿಕ್ಷಣ ಪಡೆದು ಉತ್ತಮ ಹುದ್ದೆ ಅಲಂಕರಿಸಿ ಶಾಲೆಗೆ ಮತ್ತು ಕಲಿಸಿದ ಗುರುಗಳಿಗೆ, ಸಮಾಜದ, ತಂದೆ–ತಾಯಿಯ ಋಣ ತೀರಿಸಿದಾಗ ಜನ್ಮ ಸಾರ್ಥಕವಾಗುತ್ತದೆ ಎಂದರು.

ಶಿವಾನಂದ ದಳವೆ ಮಾತನಾಡಿ, ಪ್ರತಿಬಿಂಬ ಟ್ರಸ್ಟ್ 100ಕ್ಕೂ ಹೆಚ್ಚು ಸರಕಾರಿ ಶಾಲೆಗಳನ್ನು ದತ್ತು ಪಡೆದು ಅಭಿವೃದ್ಧಿಪಡಿಸುವುದರ ಜೊತೆಯಲ್ಲಿ ಸಾವಿರಾರು ಶಾಲೆಗಳಿಗೆ ಮೂಲ ಸೌಲಭ್ಯ ಒದಗಿಸುತ್ತಾ ಬರುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ. ನಾನು ಕಲಿತ ಈ ಶಾಲೆ ಸಾಕಷ್ಟು ಅಭಿವೃದ್ಧಿ ಹೊಂದಿದ್ದು ನಮ್ಮ ಬದುಕಿಗೆ ಭದ್ರ ಬುನಾದಿ ನೀಡಿದೆ. ಕಲಿತ ಶಾಲೆಗೆ ಸಹಾಯ–ಸಹಕಾರ ನೀಡಿದಲ್ಲಿ ಸರಕಾರಿ ಶಾಲೆಗಳು ಅಭಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಡಾ. ಎಸ್.ಸಿ. ಚವಡಿ, ಸಾಹಿತಿ ಬಿ.ಎಂ. ಹರಪನಹಳ್ಳಿ, ಮಲ್ಲಾರೆಪ್ಪ ಸುಲಾಖೆ, ಮಾಹಾಂತೇಶ ಗದುಗಿನಮಠ, ಈಶ್ವರಯ್ಯ ಕಲ್ಯಾಣಮಠ, ಎಂ.ಎಂ. ಮೆಗಲಮನಿ, ಕೆ.ಎಂ. ಹೆರಕಲ್ಲ, ಬಿ.ಎಲ್. ಜಾಧಾವ, ಜಿ.ಎಂ. ಗಾಡಿ, ಮಂಜುನಾಥ ಗುಲಗಂಜಿ, ಎಫ್.ಆರ್. ಸಿದ್ದಿ, ಆಪ್ರೀನಾ ನದ್ದಿಮುಲ್ಲಾ, ಶಾಲಾ ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು ಇದ್ದರು.

### ವಾ.ಕ.ರ.ಸಾ ನಿಗಮ ಗದಗ ವಿಭಾಗದ ಕಾರ್ಮಿಕ ಸಂಘಟನೆಯಿಂದ ಉಪವಾಸ ಸತ್ಯಾಗ್ರಹ

# ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯ ಗದಗ ವಿಭಾಗವು ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ವಾ.ಕ.ರ.ಸಾ ಸಂಸ್ಥೆಯ ಗದಗ ವಿಭಾಗೀಯ ಕಚೇರಿಯ ಎದುರಿಗೆ ಒಂದು ದಿನದ ಉಪವಾಸ ಸತ್ಯಾಗ್ರಹ ನಡೆಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಿತು.

1–1–2024ರಿಂದ ಜಂಟಿ ಕ್ರಿಯಾ ಸಮಿತಿ ಜೊತೆ ಚರ್ಚಿಸಿ ಮೂಲ ವೇತನಕ್ಕೆ ಶೇ. 25ರಷ್ಟು ಹೆಚ್ಚಿಸಿ ಇತರ ಸೌಲಭ್ಯಗಳನ್ನು ನೀಡಬೇಕು, 1–1–2020ರಿಂದ 28–8–2023ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ವೇತನ ಪರಿಷ್ಕರಣೆ ಬಾಕಿ ಜೊತೆ–ಗೆ ನಿವೃತ್ತಿ ಸೌಲಭ್ಯಗಳ ಬಾಕಿ ಹಣ ಪಾವತಿಸಬೇಕು, ಹಾಲಿ ಸಿಬ್ಬಂದಿಗೆ 1–1–2020ರಿಂದ 38 ತಿಂಗಳ ವೇತನ ಪರಿಷ್ಕರಣೆ ಬಾಕಿ ಕೂಡಲೇ ಪಾವತಿಸಬೇಕು, ಶಕ್ತಿ ಯೋಜನೆ ಅಡಿ ಅನುದಾನವನ್ನು ಕೂಡಲೇ ಸಾರಿಗೆ ನಿಗಮಗಳಿಗೆ ಪಾವತಿಸಬೇಕು,



> ಈ ಹಿಂದೆ ಜಂಟಿ ಸಮಿತಿಯ ಮುಖಂಡರು ಮುಖ್ಯಮಂತ್ರಿ, ಸಾರಿಗೆ ಸಚಿವರನ್ನು ಭೇಟಿಯಾಗಿ ಎಲ್ಲ ಸಮಸ್ಯೆ ಹಾಗೂ ಬೇಡಿಕೆಗಳನ್ನು ಮನವಿ ಮಾಡಿಕೊಳ್ಳಲಾಗಿತ್ತು. ಫೆ. 14ರಂದು ಬೆಂಗಳೂರಿನಲ್ಲಿ ಜಂಟಿ ಕ್ರಿಯಾ ಸಮಿತಿಯು ದಿ.ಗುಂಡೂರಾವ್ ಹಾಲ್‌ನಲ್ಲಿ ಸಭೆ ನಡೆಸಿ ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸುವಂತೆ ರಾಜ್ಯ ಸರಕಾರವನ್ನು ಒತ್ತಾಯಿಸಲಾಗಿತ್ತು.

ಶಕ್ತಿ ಯೋಜನೆ ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಿಸಲು ಹೆಚ್ಚು ಬಸ್ಸುಗಳನ್ನು ನೀಡಬೇಕು, ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಬೇಕು. ಇತರ ಬೇಡಿಕೆಗಳನ್ನು ಮಾತುಕತೆಯ ಮೂಲಕ ಬಗೆಹರಿಸಬೇಕು ಇವೇ ಮುಂತಾದ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಮುಂದಿನ ಕ್ರಮಕ್ಕಾಗಿ ಮೇಲಾಧಿಕಾರಿಗಳಿಗೆ, ಸರಕಾರಕ್ಕೆ ಕಳುಹಿಸುವದಾಗಿ ಹೇಳಿದರು.

ಸತ್ಯಾಗ್ರಹದ ನೇತೃತ್ವವನ್ನು ಕೆ.ಎಸ್.ಆರ್.ಟಿ.ಸಿ ಸ್ಟಾಫ್ ಆ್ಯಂಡ್ ವರ್ಕರ್ಸ್ ಯುನಿಯನ್ ಗದಗ ಅಧ್ಯಕ್ಷ ಶಾಂತಣ್ಣ ಮುಳವಾಡ, ಪ್ರಧಾನ ಕಾರ್ಯದರ್ಶಿ ಗೋಪಾಲ ರಾಯರು, ಅಖಿಲ ಕರ್ನಾಟಕ ರಸ್ತೆ ಸಾರಿಗೆ ನೌಕರರ ಮಹಾಮಂಡಳ ಗದಗ ಅಧ್ಯಕ್ಷ ಬಿ.ಎಚ್. ರಾಮೇನಹಳ್ಳಿ, ಪ್ರಧಾನ ಕಾರ್ಯದರ್ಶಿ ಎಸ್.ಕೆ. ಅಯ್ಯನಗೌಡರ, ಕ.ರಾ.ರ.ಸಾ ಸಂಸ್ಥೆ ಪ.ಜಾ/ಪ.ಪಂ ನೌಕರರ ಸಂಘ ಗದಗ ಉಪಾಧ್ಯಕ್ಷ ನಾಗರಾಜ ಬಳ್ಳಾರಿ, ಪ್ರಧಾನ ಕಾರ್ಯದರ್ಶಿ ಎಚ್.ಸಿ. ಕೊಪ್ಪಳ, ವಾ.ಕ.ರ.ಸಾ ಸಂಸ್ಥೆ ಪ.ಜಾ/ಪ.ಪಂ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ ಗದಗ ಪ್ರಧಾನ ಕಾರ್ಯದರ್ಶಿ ಎಂ.ಆಂಜನೇಯ, ಖಜಾಂಚಿ ಎಸ್.ಎಫ್.ಸಂಗಣ್ಣವರ ವಹಿಸಿದ್ದರು.

**ಸೋಮೇಶ ಹಿರೇಮಠ ಸೇವಾ ಪ್ರತಿಷ್ಠಾನದಿಂದ ಸಾಧಕರಿಗೆ ಸನ್ಮಾನ**

# ಪ್ರತಿಷ್ಠಾನದಿಂದ ಸಮಾಜಮುಖಿ ಕಾರ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಸೋಮೇಶ ಹಿರೇಮಠ ಸೇವಾ ಪ್ರತಿಷ್ಠಾನ ಸಮಾಜಮುಖಿ ಹಾಗೂ ಜನಮುಖಿ ಕಾರ್ಯಗಳನ್ನು ಮಾಡುವ ಮೂಲಕ ಜನಮೆಚ್ಚುಗೆಗೆ ಪಾತ್ರವಾಗಿದೆ ಎಂದು ಮಲ್ಲಸಮುದ್ರದ ಪೂಜ್ಯ ಶ್ರೀ ಫಕ್ಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಗುರುವಾರ ನಗರದ ಖಾಸಗಿ ಹೋಟೇಲ್ ಸಭಾಂಗಣದಲ್ಲಿ ಸೋಮೇಶ ಹಿರೇಮಠ ಸೇವಾ ಪ್ರತಿಷ್ಠಾನ ಏರ್ಪಡಿಸಿದ್ದ ಸಾಧಕ ಮಹನೀಯರಿಗೆ ಸನ್ಮಾನ ಹಾಗೂ ಶಿವನಗೌಡ ಪ್ರಭುಗೌಡ ಪಾಟೀಲ ಅವರ ಜನ್ಮದಿನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸಂಗೀತ, ಸಾಹಿತ್ಯ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಜರುಗಿಸುವ, ಪರಿಸರ ಸಂರಕ್ಷಣೆ, ಸಸಿ ವಿತರಣೆ, ಹಿರಿಯ ಕಲಾವಿದರಿಗೆ ಹಾಗೂ ಸಾಧಕ ಮಹನೀಯರಿಗೆ ಸನ್ಮಾನ, ಪ್ರತಿಭಾ ಪುರಸ್ಕಾರ, ಕೊರೋನಾ ಸಂದರ್ಭದಲ್ಲಿ ಆಹಾರ ಕಿಟ್‌ಗಳನ್ನು ವಿತರಿಸಿ ಪ್ರತಿಷ್ಠಾನವು ಜನಮನ್ನಣೆ ಪಡೆದಿದೆ ಎಂದರು.

ಗದಗ ಜಿಲ್ಲಾ ಬಿಜೆಪಿ ನೂತನ ಅಧ್ಯಕ್ಷ ರಾಜು ಕುರಡಗಿ, ಗದಗ ಜಿಲ್ಲಾ ಬಿಜೆಪಿಯ ಎಸ್.ಸಿ ಮೋರ್ಚಾ ಅಧ್ಯಕ್ಷ ಮಂಜುನಾಥ ಶಿವಣ್ಣ ಮುಳಗುಂದ, ಗದಗ-ಬೆಟಗೇರಿ ನಗರಸಭೆಯ ಅಧ್ಯಕ್ಷೆ ಉಷಾ ದಾಸರ, ಬಿಜೆಪಿ ಮುಖಂಡ ಮಹೇಶ ದಾಸರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ನಿರೀಕ್ಷಕಿ ಜಹೀದಾಬೇಗಂ ಕಮತಗಿ, ಸಾಹಿತಿ ಕವಿತಾ ದಂಡಿನ, ಪತ್ರಕರ್ತ ಬಸವರಾಜ ದಂಡಿನ, ಧುರೀಣರಾದ ಅಮರನಾಥ ಗಡಗಿ ಅವರನ್ನು ಪ್ರತಿಷ್ಠಾನದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಸೋಮೇಶ ಹಿರೇಮಠ ಸೇವಾ ಪ್ರತಿಷ್ಠಾನದ ಅಧ್ಯಕ್ಷ ಬಸವಣ್ಣೆಯ್ಯ ಹಿರೇಮಠ ಸ್ವಾಗತಿಸಿ ನಿರೂಪಿಸಿದರು. ಧೀರಜ ನಂದಿಕೋಲಮಠ ವಂದಿಸಿದರು.

ಸಮಾರಂಭದಲ್ಲಿ ಬಸನಗೌಡ ಪಾಟೀಲ, ಶಾರದಾ ಪಾಟೀಲ, ಆನಂದ ದಾಸರ, ಶಾಂತಗೌಡ ಪಾಟೀಲ, ಶ್ವೇತಾ ಹಡಗಲಿ, ಸಕ್ಕೂಬಾಯಿ ದಾಸರ, ಕಾವ್ಯ ಪಾಟೀಲ, ನೀಲವ್ವ ಭದ್ರಾಪೂರ, ನಿವೇದಿತಾ ಪಾಟೀಲ, ಜಗ್ಗು ಕಟ್ಟಿಮನಿ, ವಿಜಯಲಕ್ಷ್ಮೀ ದಾಸರ, ಶಿವಲೀಲಾ ಹಿರೇಮಠ ಮುಂತಾದವರಿದ್ದರು.



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕು ಕದಾಂಪೂರ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಜರುಗಿತು. ಗ್ರಾ.ಪಂ ಅಧ್ಯಕ್ಷೆ ಹುಲಿಗೆಮ್ಮ ಪಾಟೀಲ, ಉಪಾಧ್ಯಕ್ಷೆ ರೇಣುಕಾ ಲಮಾಣಿ, ಸಮುದಾಯದ ಮುಖಂಡರು, ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು, ಗ್ರಾಮ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು.

**ರಾಜ್ಯ ಕಾಂಗ್ರೆಸ್ ಸರ್ಕಾರದ ದಲಿತ ವಿರೋಧಿ ನೀತಿ ಖಂಡಿಸಿ ಬಿಜೆಪಿಯಿಂದ ಪ್ರತಿಭಟನೆ**

# ಕಾಂಗ್ರೆಸ್‌ನಿಂದ ಡೋಂಗಿ ದಲಿತ ಕಾಳಜಿ ಬಯಲು

■ ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣೆಯಲ್ಲಿ ರಾಜ್ಯ ಕಾಂಗ್ರೆಸ್‌ನವರು ತಮ್ಮ ಗೆಲುವಿನ ಸಲುವಾಗಿ ದಲಿತರಿಗೆ ಮೀಸಲಿಟ್ಟಿದ್ದ 11,144 ಖಅಖಕ/ಖಿಖಕ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಲು ವರ್ಗಾಯಿಸಿ, ತಮ್ಮ ಸ್ವಾರ್ಥ ಸಾಧನೆ ಪೂರೈಸಿಕೊಂಡು ಡೋಂಗಿ ದಲಿತ ಕಾಳಜಿಯನ್ನು ಬಯಲು ಮಾಡಿದ್ದಾರೆ. ದಲಿತರ ಹಿತರಕ್ಷಣೆ ಮಾಡಬೇಕಿದ್ದ ಸಮಾಜಕಲ್ಯಾಣ ಸಚಿವ ಹೆಚ್.ಸಿ. ಮಹದೇವಪ್ಪನವರು ಈ ಅನ್ಯಾಯದ ವಿರುದ್ಧ ಸೊಲ್ಲೆತ್ತದೆ ಕಾಂಗ್ರೆಸ್ ಪಕ್ಷದ ಹಿತಕ್ಕೆ ದಲಿತ ಸಮುದಾಯದ ಹಿತವನ್ನು ರಾಜಿ ಮಾಡಿಕೊಂಡಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಆರೋಪಿಸಿದರು.

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ವತಿಯಿಂದ ರಾಜ್ಯದಲ್ಲಿ ಕಳೆದ ಒಂಭತ್ತು ತಿಂಗಳಲ್ಲಿ ಕಾಂಗ್ರೆಸ್ ಆಡಳಿತವು ದಲಿತ ಸಮುದಾಯದ ವಿಚಾರದಲ್ಲಿ ಕೇವಲ ಮಾತಿನಲ್ಲಿ ಮಾತ್ರ ಕಾಳಜಿಯನ್ನು ತೋರಿ ದಲಿತ ಸಮುದಾಯವನ್ನು ವಂಚಿಸುತ್ತಿರುವ ಬಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಎದುರು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.



ಸಿದ್ದರಾಮಯ್ಯನವರು ಅಲ್ಪಸಂಖ್ಯಾತರಿಗೆ 10 ಸಾವಿರ ಕೋಟಿ ರೂ ಹಣವನ್ನು ವೆಚ್ಚ ಮಾಡಲು ಮಾತ್ರ ಯಾವ ಗ್ಯಾರಂಟಿಯೂ ಅಡ್ಡ ಬಂದಿಲ್ಲ. ಇವರಿಗೆ ದಲಿತರ ಹಿತಾಸಕ್ತಿಗಿಂತ ಮತ ಬ್ಯಾಂಕ್ ರಾಜಕಾರಣವೇ ಆದ್ಯತೆಯಾಗಿರುವುದು ಶೋಚನೀಯ ಸಂಗತಿ. ಮೊರಾರ್ಜಿ ಶಾಲೆಯ ಅಭಿವೃದ್ಧಿ ಮತ್ತು ಹೊಸ ಶಾಲೆಗಳ ಆರಂಭಕ್ಕೆ ಮೀಸಲಾದ ಹಣವೂ ಇತರ ಯೋಜನೆಗಳಿಗೆ ಬಳಕೆಯಾಗಿ ದಲಿತ ಮತ್ತು ಹಿಂದುಳಿದ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

> ರೈತ ನಿಧಿ ಯೋಜನೆಯಲ್ಲಿ ದಲಿತ ಕುಟುಂಬದ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ವಿದ್ಯಾರ್ಥಿ ವೇತನ ಸ್ಥಗಿತಗೊಂಡಿದೆ. ಕಿಸಾನ್ ಸಮ್ಮಾನ್ ಯೋಜನೆಗೆ ಹೆಚ್ಚುವರಿಯಾಗಿ ನೀಡುತ್ತಿದ್ದ 4 ಸಾವಿರ ರೂ. ಗಳಿಗೂ ಕತ್ತರಿ ಪ್ರಯೋಗವಾಗಿದೆ. ಸಿದ್ದರಾಮಯ್ಯನವರು ಬಾಯಿ ತೆರೆದರೆ ದಲಿತ ಮತ್ತು ಆದಿವಾಸಿಗಳ ಕಲ್ಯಾಣದ ಬಗ್ಗೆ ಮಾತನಾಡುವುದಕ್ಕೆ ಮಾತ್ರ ಅವರ ಹಿತಾಸಕ್ತಿಯನ್ನು ಸಿಮೀತಗೊಳಿಸಿದ್ದಾರೆ ಎಂದು ರಾಜು ಕುರುಡಗಿ ಆರೋಪಿಸಿದರು.

ಬಿಜೆಪಿ ಎಸ್.ಸಿ ಮೋರ್ಚಾ ಜಿಲ್ಲಾಧ್ಯಕ್ಷ ಮಂಜುನಾಥ ಮುಳಗುಂದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಪಕ್ಕಿರೇಶ ರಟ್ಟಿಹಳ್ಳಿ ಮಾತನಾಡಿ, ಗ್ಯಾರಂಟಿಗೆ ಹಣ ನೀಡಬೇಕಾದ ಕಾರಣ 2024-25ರ ಮುಂಗಡ ಪತ್ರದಲ್ಲಿ ಮತ್ತೆ 11ಸಾವಿರ ಕೋಟಿ ರೂ ಅನುದಾನ ಕಡಿತವಾಗಿದೆ. ಸಂವಿಧಾನ ಜಾಥಾ ಮಾಡುತ್ತಿರುವ ಸರಕಾರ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿ ದಲಿತರಿಗೆ ಸೇರಬೇಕಾದ ಅನುದಾನದ ವಿಷಯದಲ್ಲಿ ಅನ್ಯಾಯ ಮಾಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಸಭಾಧ್ಯಕ್ಷೆ ಉಷಾ ದಾಸರ, ಪ್ರಮುಖರಾದ ಈಶ್ವರಪ್ಪ ನಾಯ್ಕರ, ಅನಿಲ ಅಬ್ಬಿಗೇರಿ, ಪ್ರಶಾಂತ ನಾಯ್ಕರ, ಲಕ್ಷ್ಮಣ ದೊಡ್ಡಮನಿ, ಈಶಪ್ಪ ನಾಯ್ಕರ, ಶಿವು ಹಿರೇಮನಿಪಾಟೀಲ, ನಾಗರಾಜ ತಳವಾರ, ಗೋವಿಂದರಾಜ ಪೂಜಾರ, ದೇವಪ್ಪ ಇಟಗಿ, ಶಶಿಧರ ದಿಂಡೂರ, ಈರ್ಷಾದ ಮಾನ್ವಿ, ಮುತ್ತು ಮುಶಿಗೇರಿ, ರಮೇಶ ಸಜ್ಜಗಾರ, ಮಂಜುನಾಥ ಶಾಂತಗೇರಿ, ಮಲ್ಲು ಮಾದರ, ಸುರೇಶ ಚಲವಾದಿ, ನಿರ್ಮಲಾ ಕೊಳ್ಳಿ, ವಾಯ್.ಪಿ. ಅಡ್ನೂರ, ವಿಜಯಲಕ್ಷ್ಮೀ ಮಾನ್ವಿ, ರೇಖಾ ಬಂಗಾರಶೆಟ್ಟರ, ಬೂದಪ್ಪ ಹಳ್ಳಿ, ನವೀನ ಕೊಟೆಕಲ್, ರಾಹುಲ ಸಂಕಣ್ಣವರ, ಪದ್ಮಾ ಮುತ್ತಲದಿನ್ನಿ, ಗಂಗಾಧರ ಹಬೀಬ, ವಿನಾಯಕ ಮಾನ್ವಿ, ಮಂಜುನಾಥ ವಡ್ಡರ, ಮಾರುತಿ ವ್ಯಾಗೇರಿ, ಶರಣು ಚಲವಾದಿ, ಶಿವಾನಂದ ಮಾದರ, ಮುದಿಯಪ್ಪ ದಾಣಿ, ಪ್ರವೀಣ ವಡ್ಡರ ಮುಂತಾದವರು ಉಪಸ್ಥಿತರಿದ್ದರು.

**ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು**

# ಹರ್ಡೇಕರ ಮಂಜಪ್ಪನವರ ಸಾಧನೆ ಸ್ಮರಣೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಹರ್ಡೇಕರ ಮಂಜಪ್ಪನವರು ಕರ್ನಾಟಕದ ಗಾಂಧಿ ಎಂದೇ ಪ್ರಸಿದ್ಧರು. ಕರ್ನಾಟಕದಲ್ಲಿ ಮೊದಲ ಬಾರಿಗೆ ಬಸವ ಜಯಂತಿಯನ್ನು ಆಚರಿಸಿದ ಮಹಾನುಭಾವರು. ಕನ್ನಡ ನಾಡು-ನುಡಿಗೆ ಹರ್ಡೇಕರ ಮಂಜಪ್ಪನವರ ಕೊಡುಗೆ ಅಪಾರ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2681ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಹರ್ಡೇಕರ ಮಂಜಪ್ಪನವರು ಸ್ವಾತಂತ್ರ್ಯ ಹೋರಾಟಕ್ಕೆ ಸಾಕಷ್ಟು ಜನರನ್ನು ಸಂಘಟಿಸಿ ಜಾಗೃತಿ ಮೂಡಿಸಿದ್ದಾರೆ. ಸಾಹಿತ್ಯ, ಶಿಕ್ಷಣ, ಪತ್ರಿಕೋದ್ಯಮ, ಖಾದಿ, ಸಾಮಾಜಿಕ ಹೀಗೆ ಅನೇಕ ಕ್ಷೇತ್ರಗಳಲ್ಲಿ ಅವರು ಸಲ್ಲಿಸಿದ ಸೇವೆ ಮತ್ತು ಸಾಧನೆ ಸ್ಮರಣೀಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.



> 'ಹರ್ಡೇಕರ ಮಂಜಪ್ಪನವರ ಕೊಡುಗೆ' ವಿಷಯದ ಕುರಿತು ಪ್ರೊ. ಎನ್.ಎಂ. ಪವಾಡಿಗೌಡ್ರ ಉಪನ್ಯಾಸ ನೀಡಿ, ಹರ್ಡೇಕರ ಮಂಜಪ್ಪನವರು, ಫ.ಗು. ಹಳಕಟ್ಟಿಯವರು ಇನ್ನೂ ಅನೇಕ ಮಹಿಮರು ಬಸವಣ್ಣನವರನ್ನು ಅಪ್ಪಿಕೊಂಡವರು. ಲಿಂಗಾಯತ ಅಂದರೆ ಎಲ್ಲವನ್ನೂ ಒಳಗೊಂಡಿದ್ದು, ವಿಶ್ವವು ಲಿಂಗದ ಆಕಾರದಲ್ಲಿದೆ. ವಿಶ್ವದಲ್ಲಿರುವ ಸಕಲ ಜೀವಾತ್ಮರಿಗೆ ಲೇಸನೇ ಬಯಸುವವರು ನಮ್ಮ ಕೂಡಲ ಸಂಗಮ ಶರಣರು. ಇಂತಹ ಲಿಂಗಾಯತ ತತ್ತ್ವವನ್ನು, ಜಾಗತಿಕತೆಯನ್ನು, ರಾಷ್ಟ್ರೀಯತೆಯನ್ನು ಒಪ್ಪಿಕೊಂಡ ಕನ್ನಡದ ಮನುಷ್ಯ ಹರ್ಡೇಕರ ಮಂಜಪ್ಪನವರು ಎಂದು ಹೇಳಿದರು.

ಮೃತ್ಯುಂಜಯ ಹಿರೇಮಠ, ಗುರುನಾಥ ಸುತಾರ ಸಂಗಡಿಗರು ವಚನಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಶಿವಾನಿ ಅಶೋಕ ಆಸಂಗಿ, ವಚನ ಚಿಂತನೆಯನ್ನು ಹರ್ಷಿತಾ ಹನುಮಂತ ಏಕಬೋಟೆ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಿದ್ದ ಶಾಂತಾದೇವಿ ಅಂದಾನೆಪ್ಪ ಗೌಡರ ಹಾಗೂ ಪರಿವಾರ ಗದಗ, ಲಿಂ. ಸಿಂದಗಿ ಶಾಂತವೀರ ಪಟ್ಟಾಧ್ಯಕ್ಷರು, ಕಸಾಪ ದತ್ತಿ, ಶ್ರೀ ತೋಂಟದ ಸಿದ್ಧಲಿಂಗೇಶ್ವರ ಕೈಂಕರ್ಯ ಸೇವಾ ಸಂಘ ಎಡೆಯೂರು, ಕಸಾಪ ದತ್ತಿ ಗದಗ ಅವರನ್ನು ಪೂಜ್ಯರು ಸಂಮಾನಿಸಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

**ಅವ್ವ ಸೇವಾ ಟ್ರಸ್ಟ್ ವತಿಯಿಂದ ಜಿಲ್ಲಾಧಿಕಾರಿ, ಅಪರ ಜಿಲ್ಲಾಧಿಕಾರಿಗಳಿಗೆ ಸನ್ಮಾನ**

# ಜಿಲ್ಲಾಧಿಕಾರಿಗಳಿಂದ ಗದುಗಿಗೆ ಹೆಮ್ಮೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತದ ಹೊಣೆ ಹೊತ್ತಿರುವ ಜಿಲ್ಲಾಧಿಕಾರಿ ಎಮ್.ಎಲ್. ವೈಶಾಲಿ ಹಾಗೂ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಅತ್ಯುತ್ತಮ ಸೇವೆ ಸಲ್ಲಿಸುವ ಮೂಲಕ ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಈರ್ವರ ಸೇವೆ ಗುರುತಿಸಿ ಸಭಾಪತಿ ಬಸವರಾಜ ಹೊರಟ್ಟಿಯವರ ನೇತೃತ್ವದ ಅವ್ವ ಸೇವಾ ಟ್ರಸ್ಟ್ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಶ್ರೀ ಮಹಾಸರಸ್ವತಿ ಪೂಜಾ ಸಮಾರಂಭ ಹಾಗೂ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಲು ಆಗಮಿಸಿದ ಸಂದರ್ಭದಲ್ಲಿ ಅವ್ವ ಸೇವಾ ಟ್ರಸ್ಟ್ ಸಂಚಾಲಕ ಡಾ.ಬಸವರಾಜ ಧಾರವಾಡ ಸನ್ಮಾನಿಸಿ ಮಾತನಾಡಿ, ಎಮ್.ಎಲ್. ವೈಶಾಲಿಯವರು ಜಿಲ್ಲಾಧಿಕಾರಿಗಳಾಗಿ ಹೊಣೆ ಹೊತ್ತಮೇಲೆ ಕಳೆದ ವಿಧಾನಸಭಾ ಸಾರ್ವತ್ರಿಕ ಚುನಾವಣೆ, ರಾಜ್ಯಮಟ್ಟದ ಸುವರ್ಣ ಸಂಭ್ರಮ, ಲಕ್ಕುಂಡಿ ಉತ್ಸವ ಹೀಗೆ ಹಲವಾರು ಬಾರಿ ರಾಜ್ಯಮಟ್ಟದ ಕಾರ್ಯಕ್ರಮಗಳನ್ನು ಅತ್ಯಂತ ಯಶಸ್ವಿಯಾಗಿ ನಿಭಾಯಿಸಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.




> ಇತ್ತೀಚೆಗೆ ಚುನಾವಣಾ ಸಂಬಂಧಿತ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮ ಕಾರ್ಯನಿರ್ವಹಿಸಿದ್ದಕ್ಕೆ ಜಿಲ್ಲಾಧಿಕಾರಿಗಳಿಗೆ ರಾಜ್ಯಮಟ್ಟದ ಪ್ರಶಸ್ತಿ ಲಭಿಸಿದೆ. ಜನಸಾಮಾನ್ಯರ ಜಿಲ್ಲಾಧಿಕಾರಿಗಳಾಗಿ ಸೇವೆ ಸಲ್ಲಿಸುವ ಮೂಲಕ, ಜನಸ್ಪಂದನ ಕಾರ್ಯಕ್ರಮದಲ್ಲಿ ಹಲವಾರು ನಾಗರಿಕರಿಗೆ ನ್ಯಾಯ ಒದಗಿಸಿಕೊಡುವಲ್ಲಿ ಯಶಸ್ವಿಯಾಗಿದ್ದಾರೆ. ಅಂತೆಯೇ ಅಪರ ಜಿಲ್ಲಾಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿರುವ ಅನ್ನಪೂರ್ಣ ಮುದಕಮ್ಮನವರ ಕೂಡಾ ದಕ್ಷ, ಪ್ರಾಮಾಣಿಕ ಕಾರ್ಯಗಳನ್ನು ಮಾಡುವ ಮೂಲಕ ಸಮಸ್ಯೆ ಹೊತ್ತು ಬಂದವರಿಗೆ ಸದಾ ಸ್ಪಂದಿಸುತ್ತಿದ್ದಾರೆ. ಇವರ ಸೇವೆಯನ್ನು ಸ್ಮರಿಸಿ ಅವ್ವ ಸೇವಾ ಟ್ರಸ್ಟ ಗೌರವಿಸಿದೆ ಎಂದು ಡಾ.ಬಸವರಾಜ ಧಾರವಾಡ ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಬಿ.ಅಣ್ಣಿಗೇರಿ, ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಸ್. ಮುಳಗುಂದಮಠ, ಶಶಿಕಲಾ ಗುಳೆದವರ, ಸರ್ವಮಂಗಳ ಪತ್ತಾರ್, ಮಂಜುಳಾ ಸಾಂಬ್ರಾಣಿ, ಎಸ್.ಬಿ. ಗದ್ದನಗೇರಿ, ಜಿ.ಎನ್. ಅಳವಂಡಿ, ಶಂಕ್ರಮ್ಮ ಹನಮಗೌಡರ, ಶಾರದಾ ಬಾಣದ, ಶೋಭಾ ಗಾಳಿ, ಎಸ್.ಯು. ಕುಷ್ಟಗಿ, ವಿ.ಬಿ. ಶಿವನಗೌಡರ, ನಾಗಪ್ಪ ಶಿರೋಳ, ರಮೇಶ ಬಸರಿ, ಪದ್ಮಾವತಿ ದಾಸರ, ಎಲ್.ಬಿ. ಮಾಳೊತ್ತರ ಸೇರಿದಂತೆ ಶಾಲೆಯ ಎಲ್ಲ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಾಜಿ ಸಚಿವ ಯಾವಗಲ್ಲರಿಗೆ ವಿ.ಪ ಸ್ಥಾನ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಸಚಿವ ಹಾಗೂ ಬಂಡಾಯ ನಾಡಿನ ಪ್ರಭಾವಿ ನಾಯಕರಾದ ಬಿ.ಆರ್. ಯಾವಗಲ್ ಅವರಿಗೆ ವಿಧಾನ ಪರಿಷತ್ ಸ್ಥಾನವನ್ನು ನೀಡಬೇಕೆಂದು ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಜಿಲ್ಲಾ ಸಂಯೋಜಕ ರಾಜು ಪೆಂಡಾರ್ ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿ, ಬಿ.ಆರ್. ಯಾವಗಲ್ ಅವರು ಒಬ್ಬ ಜಾತ್ಯತೀತ ಹಾಗೂ ದಕ್ಷ ಆಡಳಿತಗಾರಗಿದ್ದು, ತಮ್ಮ ಅಧಿಕಾರದ ಅವಧಿಯಲ್ಲಿ ನರಗುಂದ ವಿಧಾನಸಭಾ ಕ್ಷೇತ್ರಕ್ಕೆ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಸಚಿವರಿದ್ದಾಗ ರಾಜ್ಯದ ಹಾಗೂ ಗದಗ ಜಿಲ್ಲೆಯ ಜನತೆಗೆ ಉತ್ತಮ ಯೋಜನೆಗಳ ಮೂಲಕ ಸಾಕಷ್ಟು ಕೊಡಗೆಗಳನ್ನು ನೀಡಿದ್ದಾರೆ.

ಉತ್ತರ ಕರ್ನಾಟಕದ ಹಾಗೂ ಬಂಡಾಯ ನಾಡಿನ ಅನುಭವಿ ನಾಯಕರಾದ ಬಿ.ಆರ್. ಯಾವಗಲ್ ಅವರಿಗೆ ವಿಧಾನ ಪರಿಷತ್ ಸ್ಥಾನವನ್ನು ನೀಡಬೇಕೆಂದು ಈ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ಹಾಗೂ ಪಕ್ಷದ ವರಿಷ್ಠರನ್ನು ಒತ್ತಾಯಿಸಿದ್ದಾರೆ.






**ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)**

**ಕಾರ್ಯನಿರ್ವಾಹಕ ಇಂಜಿನೀಯರ, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.2/ಟೆಂಡರ/2023-24/ 2995

ದಿನಾಂಕ: 23-02-2024

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

**Standard Bid Document KW- 1 & 2 [ಏಕಲಕೋಟಿ ಪದ್ಧತಿ]**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1&2ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್** ಮುಖಾಂತರ 02 ಕಾಮಗಾರಿಯ ಟೆಂಡರನ್ನು ಆಹ್ವಾನಿಸಲಾಗಿದೆ. **ಲೆಕ್ಕ ಶೀರ್ಷಿಕೆ: 2023-24ನೇ ಸಾಲಿನ** 5054-03-337-0-75-422/423 SCP/TSP HEAD ಅನುದಾನದಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್**,(https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

**Indent Nos:** RDPR/2023-24/WORK_INDENT **: 4865, 4852**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **12.51** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **41.96** ಲಕ್ಷಗಳು

**ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ** : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **26-02-2024** ರಿಂದ **05-03-2024** ರಂದು 16.00 ಗಂಟೆಯವರೆಗೆ. ಆರ್ಥಿಕ ಬಿಡ್ ತೆರೆಯುವ ದಿನಾಂಕ : **06-03-2024** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ **20** ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು, ಪಂ.ರಾಜ್. ಇಂಜಿನೀಯರಿಂಗ್ ವಿಭಾಗ, ಗದಗ**

ವಾಸಾಸಂಇ/ಗದಗ/ಕೆಎಸ್ಎಂಸಿಎ/573/2023-24


# ವೈಯಕ್ತಿಕ ನೈರ್ಮಲ್ಯಕ್ಕೆ ಗಮನ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಇಲ್ಲಿನ ಎಸ್.ಎಮ್. ಕೃಷ್ಣ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ 'ಮಾಸಿಕ ಋತುಸ್ರಾವ (ಮುಟ್ಟಿನ) ನೈರ್ಮಲ್ಯದ ಮಹತ್ವ'ದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾದ ರೊ.ಡಾ. ಕಮಲಾಕ್ಷಿ ಅಂಗಡಿ ಮಾತನಾಡಿ, ಋತುಸ್ರಾವವೇ ಹುಟ್ಟಿಗೆ ಕಾರಣವಾಗಿದ್ದು, ಮುಟ್ಟಿನ ದಿನಗಳಲ್ಲಿ ಹೆಣ್ಣುಮಕ್ಕಳು ವೈಯಕ್ತಿಕ ನೈರ್ಮಲ್ಯವನ್ನು ನಿರ್ವಹಿಸುವಲ್ಲಿ ಹೆಚ್ಚಿನ ಗಮನ ಹರಿಸಬೇಕು.




ಮಾಸಿಕ ಋತುಸ್ರಾವವು ಪ್ರಾಕೃತಿಕ ಕ್ರಿಯೆಯಾಗಿದ್ದು, ಹೆಣ್ಣುಮಕ್ಕಳು ಇದರ ಬಗ್ಗೆ ಸರಿಯಾದ ಮಾಹಿತಿಯನ್ನು ತಿಳಿದುಕೊಳ್ಳುವುದು ಅವಶ್ಯವಿದೆ. ಪ್ರತಿಯೊಬ್ಬರೂ ವಯಕ್ತಿಕ ನೈರ್ಮಲ್ಯದ ವಿಧಾನಗಳು, ಪ್ಯಾಡ್‌ಗಳನ್ನು ಬದಲಾಯಿಸುವ ಸಮಯ, ನೈರ್ಮಲ್ಯ ವಿಧಾನಗಳು, ತೊಳೆಯುವ ವಿಧಾನಗಳು, ಪ್ಯಾಡ್‌ಗಳನ್ನು ಉಪಯೋಗಿಸಿದ ನಂತರ ನಿರ್ವಹಿಸುವ ಸರಿಯಾದ ವಿಧಾನ ಇತ್ಯಾದಿಗಳ ವಿಷಯಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದ ನಂತರ ರೋಟರಿ ಸಂಸ್ಥೆಯ ವತಿಯಿಂದ ಉಚಿತವಾಗಿ ಸ್ಯಾನಿಟರಿ ಪ್ಯಾಡ್‌ಗಳನ್ನು ವಿದ್ಯಾರ್ಥಿನಿಯರಿಗೆ ನೀಡಲಾಯಿತು. ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ, ಕಾರ್ಯದರ್ಶಿಗಳಾದ ರೊ. ವೀಣಾ ತಿರ್ಲಾಪೂರ, ರೊ. ಶ್ರೀಧರ ಸುಲ್ತಾನಪೂರ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಆರ್.ಎಸ್. ಬುರಡಿ, ಶಾಲಾ ಶಿಕ್ಷಕರಾದ ಜೆ.ಎಮ್. ಶೆಟ್ಟರ, ಎಮ್.ಬಿ. ಕಿತ್ತೂರ, ವ್ಹಿ.ಎಸ್. ಪಾಟೀಲ, ಎಸ್.ಸಿ. ನಾಗರಳ್ಳಿ, ಎಸ್.ಆರ್. ದುಂಡಸಿ, ಎಸ್.ಪಿ. ಹಿರೇಮಠ, ಎ.ಜಿ. ಗೋಣಿ, ಎಸ್.ಎಸ್. ಗೌಡರ, ಜೆ.ಎಮ್. ಹಾದಿಮನಿ, ಕವಿತಾ ದಂಡಿನ ಮುಂತಾದವರು ಉಪಸ್ಥಿತರಿದ್ದರು.




ಗದಗ ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಚನ್ನವೀರಶರಣರ ಮಠದಲ್ಲಿ 29ನೇ ಜಾತ್ರಾ ಮಹೋತ್ಸವದ ಅಂಗವಾಗಿ ಪುರುಷರ ಬಯಲು ಕುಸ್ತಿ ಜರುಗಿತು. ಶ್ರೀ ಶಿವಶಾಂತವೀರ ಶರಣರು ಸನ್ನಿಧಾನ ವಹಿಸಿ ಕುಸ್ತಿ ಪಂದ್ಯಾವಳಿಗೆ ಚಾಲನೆ ನೀಡಿದರು. ಭೂಸೇನಾ ನಿಗಮದ ಮಾಜಿ ಅಧ್ಯಕ್ಷ ಅರುಣ ಅಣ್ಣಿಗೇರಿ ಹಾಗೂ ಪೈಲ್ವಾನ್ ಶಂಕರ ಕಳಿಗೊಣ್ಣವರ, ಶಶಿಧರ ಗೂಳರಡ್ಡಿ ಮೊದಲಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka